ವಿಜಯಪುರ | ಸಂಪುಟ 04 | ಸಂಚಿಕೆ 107 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಜೂನ್, 16, 2026

"ಡಿಕೆ ಶಿವಕುಮಾರ್ ಮುಖ್ಯಮಂತ್ರಿಯಾಗಬೇಕೆಂದು ನಿರಂತರವಾಗಿ ಮಾಧ್ಯಮಗಳಿಗೆ ಹೇಳಿಕೆಗಳನ್ನು ನೀಡುತ್ತಾ, ಒಂಟಿ ಕಣ್ಣಿನಿಂದ ಕಣ್ಣೀರು ಸುರಿಸುತ್ತಿದ್ದ ಮಾಗಡಿ ಶಾಸಕ ಬಾಲಕೃಷ್ಣ, ಈಗ ಸಚಿವ ಸ್ಥಾನ ಸಿಗದ ಕಾರಣ ಹತಾಶೆಯಿಂದ ವಿರೋಧ ಪಕ್ಷದ ನಾಯಕರನ್ನು ಅವಮಾನಿಸುತ್ತಿದ್ದಾರೆ."



■ ಆರ್. ಅಶೋಕ್
ಪ್ರತಿಪಕ್ಷ ನಾಯಕರು

# ಐದು ಗ್ಯಾರಂಟಿ ಯೋಜನೆಗಳು ಯಾವುದೇ ಕಾರಣಕ್ಕೂ ನಿಲ್ಲಲ್ಲ

## ಐದು ಗ್ಯಾರಂಟಿಗಳ ಬಗ್ಗೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಹತ್ವದ ಘೋಷಣೆ



ಬೆಂಗಳೂರು: ಗ್ಯಾರಂಟಿಗಳ ಪರಿಷ್ಕರಣೆಗೆ ಸಂಬಂಧಿಸಿದಂತೆ ಪ್ರತಿಪಕ್ಷಗಳ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ಸ್ಥಗಿತಗೊಳಿಸಲಾಗುವುದಿಲ್ಲ ಎಂದು ಸೋಮವಾರ ಪ್ರತಿಪಾದಿಸಿದ್ದಾರೆ.

ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಮಾಜಿ ಸಿಎಂ, ಪಂಚ ಗ್ಯಾರಂಟಿ ಯೋಜನೆಗಳನ್ನು ಯಾವುದೇ ಕಾರಣಕ್ಕೆ ನಿಲ್ಲಿಸುವುದಿಲ್ಲ. ಮುಂದಿನ ಎರಡು ವರ್ಷಗಳ ಕಾಲ ಮಾತ್ರವಲ್ಲ, ಮುಂದಿನ ಚುನಾವಣೆಯಲ್ಲಿ ಮತ್ತೆ ನಾವು ಅಧಿಕಾರಕ್ಕೆ ಬರಲಿದ್ದೇವೆ. ಅದರ ನಂತರವೂ ಗ್ಯಾರಂಟಿಗಳು ಮುಂದುವರಿಯಲಿವೆ. ಯೋಜನೆಗಳ ಅನುಷ್ಠಾನದಲ್ಲಿ ಕಂಡು ಬರುವ ದೋಷಗಳನ್ನು ಸರಿಪಡಿಸುವ ಕೆಲಸ ಪ್ರಾರಂಭದಿಂದಲೇ ನಡೆಯುತ್ತಾ ಬಂದಿದೆ, ಈಗಲೂ ಮುಂದುವರೆದಿದೆ. ಈ ಯೋಜನೆಗಳ ಫಲಾನುಭವಿಗಳು ವಿರೋಧ ಪಕ್ಷಗಳ ಅಪಪ್ರಚಾರಕ್ಕೆ ಕಿವಿಗೊಟ್ಟು ಆತಂಕಕ್ಕೆ ಈಡಾಗಬೇಕಾಗಿಲ್ಲ ಎಂದಿದ್ದಾರೆ.

ಬಿಜೆಪಿ ಮೂಲತ: ಬಡವರ ವಿರೋಧಿ ಪಕ್ಷ. ಅದು ಗ್ಯಾರಂಟಿ ಯೋಜನೆಗಳನ್ನು ಮೊದಲ ದಿನದಿಂದಲೇ ವಿರೋಧಿಸುತ್ತಾ ಬಂದಿದೆ. ಮೊದಲು ಗ್ಯಾರಂಟಿ ಯೋಜನೆಗಳ ಜಾರಿಯೇ ಅಸಾಧ್ಯ ಎಂದರು,

ನಂತರದ ದಿನಗಳಲ್ಲಿ ಹಣಕಾಸಿನ ಕೊರತೆಯಿಂದ ಸರ್ಕಾರ ದಿವಾಳಿಯಾಗಲಿದೆ ಎಂದರು. ಈಗ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಲಾಗುವುದು ಎನ್ನುವ ಪುಕಾರು ಹಬ್ಬಿಸುತ್ತಿದ್ದಾರೆ. ಇದು ಅವರ ರಾಜಕೀಯ ಹತಾಶೆಯ ಪ್ರತೀಕ.

ಮುಖ್ಯಮಂತ್ರಿಯಾಗಿ ಐದು ಯೋಜನೆಗಳನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಜಾರಿಗೆ ತಂದಿದ್ದಲ್ಲದೆ, ಇದರಿಂದಾಗಿ ರಾಜ್ಯದ ಆರ್ಥಿಕತೆ ಮೇಲೆ ಏನೂ ದುಷ್ಪರಿಣಾಮ ಬೀರದಂತೆ ನೋಡಿಕೊಂಡಿದ್ದೇನೆ. ಇಂದು ಕರ್ನಾಟಕ ರಾಜ್ಯವು ತಲಾವಾರು ಆದಾಯದಲ್ಲಿ ದೇಶಕ್ಕೇ ಮೊದಲನೇ ಸ್ಥಾನದಲ್ಲಿದೆ, ಜಿಎಸ್‌ಟಿ ಸಂಗ್ರಹದಲ್ಲಿ ಮಹಾರಾಷ್ಟ್ರದ ನಂತರದ ಎರಡನೇ ರಾಜ್ಯ ಕರ್ನಾಟಕ. ಖಜಾನೆ ಖಾಲಿಯಾಗಿದ್ದರೆ, ಸರ್ಕಾರ ದಿವಾಳಿ ಸ್ಥಿತಿಯಲ್ಲಿದ್ದರೆ ಈ ಸಾಧನೆ ಸಾಧ್ಯವೇ?

ನಮ್ಮ ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುತ್ತಾ ಬಂದಿರುವ ಬಿಜೆಪಿ, ಅದೇ ಯೋಜನೆಗಳನ್ನು ಮಧ್ಯಪ್ರದೇಶ, ಬಿಹಾರ, ಪಶ್ಚಿಮಬಂಗಾಳ ರಾಜ್ಯಗಳಲ್ಲಿ ನಕಲು ಹೊಡೆದು ಅಧಿಕಾರಕ್ಕೆ ಬಂದಿದೆ. ಇವರಿಗೆ ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುವ ಯಾವ ನೈತಿಕತೆ ಇದೆ? ಕೆಲವು ರಾಜ್ಯಗಳ ಚುನಾವಣಾ ಪೂರ್ವದಲ್ಲಿ ಬಿಜೆಪಿ ಗ್ಯಾರಂಟಿ ಯೋಜನೆಗಳ ಆಶ್ವಾಸನೆ ನೀಡಿದರೂ ಅವುಗಳನ್ನು ಸಂಪೂರ್ಣವಾಗಿ ಜಾರಿಗೆ ತರಲು ಸಾಧ್ಯವಾಗುತ್ತಿಲ್ಲ.

# ಹೆದ್ದಾರಿ ಮೇಲೆ ಉರುಳಿದ ಬೃಹತ್ ಮರಗಳು : ಸಂಚಾರ ಅಸ್ತವ್ಯಸ್ತ

## ಚಿಕ್ಕಪಡಸಲಗಿಯಲ್ಲಿ ಭಾರಿ ಗಾಳಿ-ಮಳೆ ಅವಾಂತರ । ಜನಜೀವನ ಅಸ್ತವ್ಯಸ್ತ



■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ತಾಲ್ಲೂಕಿನ ಚಿಕ್ಕಪಡಸಲಗಿ ಗ್ರಾಮ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ರವಿವಾರ ಸಂಜೆ ಸುರಿದ ಭಾರಿ ಗಾಳಿ ಸಹಿತ ಮಳೆಗೆ ಜನಜೀವನ ಅಸ್ತವ್ಯಸ್ತಗೊಂಡ ಘಟನೆ ನಡೆದಿದೆ. ಮಳೆಯೊಂದಿಗೆ ಬೀಸಿದ ಬಿರುಗಾಳಿಯ ಅಬ್ಬರಕ್ಕೆ ಹಲವು ಬೃಹತ್ ಗಿಡಮರಗಳು ಧರೆಗುರುಳಿದ್ದು, ವಿಜಯಪುರ– ಧಾರವಾಡ ರಾಜ್ಯ ಹೆದ್ದಾರಿ ಮೇಲೆ ಉರುಳಿಬಿದ್ದ ಪರಿಣಾಮ ಕೆಲಕಾಲ ವಾಹನ ಸಂಚಾರ ಸಂಪೂರ್ಣವಾಗಿ ಸ್ಥಗಿತಗೊಂಡಿತ್ತು.

ಹೆದ್ದಾರಿ ಮೇಲೆ ದೊಡ್ಡ ಮರಗಳು ಬಿದ್ದಿದ್ದರಿಂದ ರಸ್ತೆ ಎರಡೂ ಬದಿಗಳಲ್ಲಿ ವಾಹನಗಳ ಸಾಲು ನಿರ್ಮಾಣವಾಗಿದ್ದು, ಪ್ರಯಾಣಿಕರು ಹಾಗೂ ವಾಹನ ಚಾಲಕರು ತೀವ್ರ ತೊಂದರೆ ಅನುಭವಿಸಿದರು. ಕೆಲ ಸಮಯ ವಾಹನಗಳು ರಸ್ತೆ ಮಧ್ಯದಲ್ಲೇ ನಿಂತುಕೊಂಡಿದ್ದವು. ಗಾಳಿ ಮತ್ತು ಮಳೆಯ ತೀವ್ರತೆಗೆ ಸಾರ್ವಜನಿಕರು ಸುರಕ್ಷಿತ ಸ್ಥಳಗಳಿಗೆ ತೆರಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿತ್ತು.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಪೊಲೀಸ್ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತೆಗೆದುಕೊಂಡರು. ಸ್ಥಳೀಯ ಗ್ರಾಮಸ್ಥರು ಹಾಗೂ ಸಾರ್ವಜನಿಕರು ಸಹ ಪೊಲೀಸ್ ಇಲಾಖೆಯೊಂದಿಗೆ ಕೈಜೋಡಿಸಿ ರಸ್ತೆ ಮೇಲೆ ಉರುಳಿಬಿದ್ದಿದ್ದ ಬೃಹತ್ ಮರಗಳ ಕೊಂಬೆಗಳು ಮತ್ತು ದಿಮ್ಮಿಗಳನ್ನು ತೆರವುಗೊಳಿಸುವ ಕಾರ್ಯದಲ್ಲಿ ತೊಡಗಿದರು. ಹಲವು ಗಂಟೆಗಳ ಕಾಲ ನಡೆದ ಕಾರ್ಯಾಚರಣೆಯ ಬಳಿಕ ರಸ್ತೆ ಸಂಪೂರ್ಣವಾಗಿ ತೆರವುಗೊಳಿಸಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಯಿತು. ಭಾರಿ ಮಳೆಯಿಂದ ಕೆಲವೆಡೆ ವಿದ್ಯುತ್ ವ್ಯತ್ಯಯ ಉಂಟಾಯಿತು, ಮರಗಳ ಕೊಂಬೆಗಳು ಮುರಿದು ಬಿದ್ದ ಘಟನೆಗಳು ಸಹ ವರದಿಯಾಗಿವೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಅಥವಾ ಗಂಭೀರ ಗಾಯಗಳಾಗಿಲ್ಲ. ಹೆದ್ದಾರಿಯಲ್ಲಿ ಸಂಚರಿಸುತ್ತಿದ್ದ ವಾಹನಗಳು ಸಮಯಕ್ಕೆ ಸರಿಯಾಗಿ ನಿಲ್ಲಿಸಿದ್ದರಿಂದ ಸಂಭವಿಸಬಹುದಾಗಿದ್ದ ದೊಡ್ಡ ಅನಾಹುತ ತಪ್ಪಿದಂತಾಗಿದೆ.

ಪೊಲೀಸ್ ಇಲಾಖೆ ಹಾಗೂ ಸಾರ್ವಜನಿಕರ ತ್ವರಿತ ಸ್ಪಂದನೆಯಿಂದ ಸಂಚಾರ ವ್ಯವಸ್ಥೆಯನ್ನು ಶೀಘ್ರವಾಗಿ ಪುನಃಸ್ಥಾಪಿಸಲು ಸಾಧ್ಯವಾಗಿದ್ದು, ಅವರ ಕಾರ್ಯಕ್ಕೆ ವಾಹನ ಸವಾರರು ಹಾಗೂ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಮಳೆಗಾಲದ ಸಂದರ್ಭದಲ್ಲಿ ವಾಹನ ಚಾಲಕರು ಎಚ್ಚರಿಕೆಯಿಂದ ಸಂಚರಿಸುವಂತೆ ಹಾಗೂ ಹವಾಮಾನ ವೈಪರೀತ್ಯದ ಸಂದರ್ಭದಲ್ಲಿ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

# ಭೀಕರ ರಸ್ತೆ ಅಪಘಾತ: ಶಿಕ್ಷಕ ದಂಪತಿ ದುರ್ಮರಣ!

■ ಉದಯರಶ್ಮಿ ದಿನಪತ್ರಿಕೆ





ವಿಜಯಪುರ: ಜಿಲ್ಲೆಯ ತೊರವಿ ಸಮೀಪ ಭಾನುವಾರ ಸಂಜೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಶಿಕ್ಷಕ ದಂಪತಿ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ನಡೆದಿದೆ.

ಮೃತರನ್ನು ವಿಜಯಪುರ ತಾಲ್ಲೂಕಿನ ಖತಿಜಾಪುರ ಎಚ್‌ಪಿಎಸ್ ಶಾಲೆಯ ಜಿಪಿಟಿ ಶಿಕ್ಷಕಿ ಅಂಬವ್ವ ಪೂಜೇರಿ (34) ಹಾಗೂ ನಗರದ ಚಾಣಕ್ಯ ಕರಿಯರ್ ಅಕಾಡೆಮಿಯ ಶಿಕ್ಷಕ ಗುರುಲಿಂಗ ಹುಣಶ್ಯಾಳ (37) ಎಂದು ಗುರುತಿಸಲಾಗಿದೆ. ದಂಪತಿಗೆ ಇಬ್ಬರು ಮಕ್ಕಳಿದ್ದು, ಅವರ ಅಕಾಲಿಕ ನಿಧನ ಕುಟುಂಬಸ್ಥರು ಮತ್ತು ಶಿಕ್ಷಣ ವಲಯದಲ್ಲಿ ದುಃಖದ ಛಾಯೆ ಮೂಡಿಸಿದೆ.ಮಾಹಿತಿಯ ಪ್ರಕಾರ, ತಿಕೋಟಾದಲ್ಲಿರುವ ಸಂಬಂಧಿಕರ ಮನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ವಿಜಯಪುರ ನಗರಕ್ಕೆ ಬೈಕ್‌ನಲ್ಲಿ ಮರಳುತ್ತಿದ್ದ ವೇಳೆ ತೊರವಿ ಬಳಿ ಅತಿವೇಗವಾಗಿ ಬಂದ ಲಾರಿಯೊಂದು ಬೈಕ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಇಬ್ಬರೂ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಅಪಘಾತದ ಮಾಹಿತಿ ತಿಳಿಯುತ್ತಿದ್ದಂತೆ ವಿಜಯಪುರ ಗ್ರಾಮೀಣ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಶಿಕ್ಷಕ ದಂಪತಿಯ ಅಕಾಲಿಕ ಸಾವಿನ ಸುದ್ದಿ ತಿಳಿಯುತ್ತಿದ್ದಂತೆ ಬಂಧುಗಳು, ಸ್ನೇಹಿತರು ಹಾಗೂ ಶಿಕ್ಷಣ ಕ್ಷೇತ್ರದ ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

# ತಾಳಿಕೋಟೆ ಯುವಕರ ಸೇವಾ ಕಾರ್ಯಕ್ಕೆ ಸಾರ್ವಜನಿಕರ ಪ್ರಶಂಸೆ



■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಇಲ್ಲಿಯ ಚಂದ್ರಮ್ಮ ದೇವಸ್ಥಾನದ ಬಳಿ ಕೃಷ್ಣಾ ನದಿಯ ತೀರದಲ್ಲಿ ತಾಳಿಕೋಟೆ, ಹುಲ್ಲೂರು ತಾಂಡಾದ 16 ಜನ ಯುವಕರು ಸೇರಿ 5 ಗಂಟೆಗಳ ಶ್ರಮದಾನ ಮಾಡಿ ಸುಮಾರು 2 ಟನ್ ಕಸ ತೆಗೆದಿದ್ದಾರೆ.

ತೆಗೆದ ಕಸದಲ್ಲಿ ಏನಿತ್ತು?

- ಭಕ್ತರು ಬಿಟ್ಟುಹೋದ ಹಳೆಯ ಬಟ್ಟೆಗಳು
- ಗುಟ್ಕಾ ಪ್ಯಾಕೆಟ್, ಶ್ಯಾಂಪೂ ಪೌಚ್, ಪ್ಲಾಸ್ಟಿಕ್ ಬಾಟಲಿ
- ಟೆಟ್ರಾ ಪಾಕ್, ಕುಂಕುಮ–ಅರಿಶಿಣದ ಪ್ಲಾಸ್ಟಿಕ್ ಚೀಲ

**ವಿಶೇಷ ಏನು?**

ಸ್ವಂತ ಖರ್ಚು: 60 ಕಿ.ಮೀ ದೂರದಿಂದ ಬಂದು, ಸ್ವಂತ ಖರ್ಚಲ್ಲಿ ಈ ಕೆಲಸ ಮಾಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಮನು ನಾಯ್ಕೋಡಿ ಅವರ ಕರೆಗೆ ಸ್ಪಂದಿಸಿ ವಾಟ್ಸಾಪ್/ಫೇಸ್‌ಬುಕ್ ಮೂಲಕ ಸೇರಿದ ತಂಡ.

ಸಹಕಾರ: ಲಕ್ಷ್ಮಿ ಕ್ಲಾಥ್ ಸ್ಟೋರ್ ಉಚಿತ ಬಟ್ಟೆ ಚೀಲ ಕೊಟ್ಟಿದೆ. ಅಪರಿಚಿತರು ನೀರಿನ ಬಾಕ್ಸ್ ಕೊಟ್ಟು ಸಹಾಯ ಮಾಡಿದ್ದಾರೆ.

ಸಂದೇಶ: "ರಾಜಕಾರಣಿಗಳು ಬಾಗಿನ ಅರ್ಪಿಸಿದರೆ ಸಾಲದು, ನದಿ ಸ್ವಚ್ಛ ಮಾಡೋದೇ ನಿಜವಾದ ಬಾಗಿನ" ಅಂತ ಯುವಕರ ಮಾತು.

ಇಂತಹ ಯುವಕರು ಇದ್ದರೆ ನಮ್ಮ ನದಿ, ಪರಿಸರ ಉಳಿಯುತ್ತೆ ಎಂಬುದು ಈ ಯುವಕರ ಅಂಬೋಣ.

ಮನು ನಾಯ್ಕೋಡಿ, ರಾಜೇಂದ್ರ ಈಳಗೇರ, ಸೂರಜ್ ರಾಠೋಡ ಸೇರಿದಂತೆ ಎಲ್ಲ 16 ಜನ ಯುವಕರ ಸೇವಾಕಾರ್ಯಕ್ಕೆ ಸಾರ್ವಜನಿಕರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

# ಮಹನೀಯರ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯಲ್ಲಿ ಮುಂಬರುವ ಜೂನ್ 27–ನಾಡಪ್ರಭು ಕೆಂಪೇಗೌಡ ಜಯಂತಿ, ಜೂನ್ 27ರಂದು ನಾಡಪ್ರಭು ಕೆಂಪೇಗೌಡ ಹಾಗೂ ಜುಲೈ 02ರಂದು ಡಾ. ಫ.ಗು. ಹಳಕಟ್ಟಿ ಜನ್ಮದಿನ ಹಾಗೂ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆಯನ್ನು ಮಹನೀಯರ ಜಯಂತಿ ಕಾರ್ಯಕ್ರಮಗಳನ್ನು ಯಾವುದೇ ಲೋಪವಿಲ್ಲದೆ, ಅತ್ಯಂತ ಅರ್ಥಪೂರ್ಣ ಹಾಗೂ ಅಚ್ಚುಕಟ್ಟಾಗಿ ಆಯೋಜಿಸುವಂತೆ ಅಪರ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಜಯಂತಿ ಕಾರ್ಯಕ್ರಮಗಳ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಈ ಸೂಚನೆ ನೀಡಿದರು.

ಜಯಂತಿ ಕಾರ್ಯಕ್ರಮಗಳ ಯಶಸ್ವಿ ಆಯೋಜನೆಗಾಗಿ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಈಗಾಗಲೇ ವಹಿಸಲಾಗಿರುವ ಜವಾಬ್ದಾರಿಗಳನ್ನು ಎಲ್ಲರೂ ಸಮರ್ಪಕವಾಗಿ ನಿರ್ವಹಿಸಬೇಕು. ಕಾರ್ಯಕ್ರಮಗಳ ನಿಮಿತ್ತ ಅಗತ್ಯವಿರುವ ಎಲ್ಲಾ ಪೂರ್ವ ಸಿದ್ಧತೆಗಳನ್ನು ಮುಂಚಿತವಾಗಿಯೇ ಮಾಡಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಜೂನ್ 27–ನಾಡಪ್ರಭು ಕೆಂಪೇಗೌಡ ಜಯಂತಿ,ಜೂನ್ 27ರಂದು ನಾಡಪ್ರಭು ಕೆಂಪೇಗೌಡ ಅವರ ಜಯಂತಿಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮದೊಂದಿಗೆ ಆಚರಿಸಲಾಗುವುದು. ಜುಲೈ 02–ಡಾ. ಫ.ಗು. ಹಳಕಟ್ಟಿ ಜನ್ಮದಿನ ಹಾಗೂ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆಯನ್ನು ಉಪನ್ಯಾಸ ಕಾರ್ಯಕ್ರಮದೊಂದಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗುವುದು. ಜುಲೈ 29–ಹಡಪದ ಅಪ್ಪಣ್ಣ ಜಯಂತಿಯನ್ನು ಜಿಲ್ಲಾಡಳಿತದ ವತಿಯಿಂದ ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿಗಳು ವಿವರಿಸಿದರು.


ಈ ಪೂರ್ವಭಾವಿ ಸಭೆಯಲ್ಲಿ ಮಹಾನಗರ ಪಾಲಿಕೆಯ ಉಪ ಆಯುಕ್ತ ಮಹಾವೀರ ಬೋರಣ್ಣನವರ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪುಂಡಲೀಕ ಮಾನವರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ, ಎಸ್. ಅಶೋಕಕುಮಾರ, ಎಸ್.ಜಿ. ಸುರಪುರ, ಎ.ಬಿ. ಅಂಕದ, ಗಿರೀಶ ಕುಲಕರ್ಣಿ, ದೇವೇಂದ್ರ ಮೆರೇಕರ, ಡಾ. ಎಂ.ಆರ್. ಗುರಿಕರ, ವಿದ್ಯಾವತಿ ಅಂಕಲಗಿ, ಸೋಮನಗೌಡ ಕಲ್ಲೂರ, ಭೀಮರಾಯ ಜಿಗಜಿಣಗಿ ಸೇರಿದಂತೆ ವಿವಿಧ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಸಮಾಜದ ಮುಖಂಡರು ಮತ್ತು ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಗಣನೀಯ ಪ್ರಮಾಣದಲ್ಲಿ ನೀರಿನ ಮಟ್ಟ ಕುಸಿತ : ಆತಂಕದಲ್ಲಿ ರೈತರು

## ಕಬಿನಿ ಹಿನ್ನೀರಿನಲ್ಲಿ ಬಸವೇಶ್ವರ ದೇಗುಲದ ಅವಶೇಷಗಳು ಗೋಚರ

■ ವಿಶೇಷ ವರದಿ: ಶ್ರೀಕಂಠ ಈಶ್ವರ್

ಎಚ್ ಡಿ ಕೋಟೆ: ಮಳೆಗಾಲದಲ್ಲಿ ನೀರಿನಿಂದ ತುಂಬಿ ತುಳುಕುವ ಜಲಾಶಯ ನೋಡುವುದೇ ಚೆಂದ. ಜಲಾಶಯ ಭರ್ತಿಗೆ ಇನ್ನು ಎರಡು–ಮೂರು ಅಡಿ ಬಾಕಿ ಇದ್ದಾಗ ರೈತರು ಮತ್ತು ಸ್ಥಳೀಯರು ಸಂತಸ



ಪಡುತ್ತಾರೆ, ಏಕೆಂದರೆ ಇದು ನೀರಾವರಿ ಮತ್ತು ಕುಡಿಯುವ ನೀರಿನ ಭರವಸೆ ನೀಡುತ್ತದೆ. ನಾಡಿನ ಸಮೃದ್ಧಿಯ ಸಂಕೇತ ಪ್ರತಿಬಿಂಬಿಸುತ್ತೆ. ಆದರೆ ಕೆಲವೊಮ್ಮೆ ಮಳೆಯ ಕೊರತೆಯಿಂದ ಹರಿದು ಬರುವ ನೀರಿನ ಪ್ರಮಾಣ ಕಡಿಮೆಯಾಗಿ ಜಲಾಶಯ ಖಾಲಿಯಾಗುತ್ತಾ ಹೋಗುತ್ತಿದ್ದಂತೆಯೇ ಜಲಾಶಯ ತನ್ನೊಡಲಲ್ಲಿ ಹುದುಗಿಟ್ಟ ರಹಸ್ಯವನ್ನು ಹೊರಹಾಕಿ ಬಿಡುತ್ತದೆ. ಈ ವೇಳೆ ಕಂಡು ಬರುವ ದೃಶ್ಯಗಳು ವಿಜ್ಞಾನ ಲೋಕವನ್ನೇ ವಿಸ್ಮಯಗೊಳಿಸುತ್ತೆ.

ಕೆಆರ್ ಎಸ್ ಜಲಾಶಯದಲ್ಲಿ ನೀರು ಕಡಿಮೆಯಾಗುತ್ತಿದ್ದಂತೆಯೇ ವೇಣುಗೋಪಾಲ ಸ್ವಾಮಿ ದೇವಸ್ಥಾನ, ಇನ್ನಿತರ ಪಳೆಯುಳಿಕೆಗಳು ಪತ್ತೆಯಾಗುತ್ತೆ. ಅದೇ ರೀತಿ ಹೆಚ್ ಡಿ ಕೋಟೆ ತಾಲೂಕಿನ ಕಬಿನಿ ಜಲಾಶಯದಲ್ಲಿ ನೀರಿನ ಪ್ರಮಾಣ ಕಡಿಮೆಯಾಗುತ್ತ ಹೋದರೆ ಕಂಡು ಕೇಳರಿಯದ ಅಚ್ಚರಿಗಳು ಬೆಳಕಿಗೆ ಬರುತ್ತವೆ. 2013 ಮತ್ತು 2016ರಲ್ಲಿ ಮಳೆ ಕೊರತೆಯಿಂದಾಗಿ ಕಬಿನಿ ಜಲಾಶಯದಲ್ಲಿ ನೀರು ಖಾಲಿಯಾಗಿತ್ತು. ಈ ವೇಳೆ ಹಿನ್ನೀರಿನಲ್ಲಿ ಕಂಡು ಬಂದಿದ್ದ ದೃಶ್ಯಗಳು ಅಚ್ಚರಿಯನ್ನುಂಟು ಮಾಡಿದ್ದವು.

ಇದೀಗ ಮತ್ತೆ ಬೀಚನಹಳ್ಳಿ ಗ್ರಾಮದ ಕಬಿನಿ ಜಲಾಶಯದ ಹಿನ್ನೀರಿನಲ್ಲಿ ಸಾಕಷ್ಟು ವರ್ಷಗಳ ಹಿಂದೆ ಮುಳುಗಡೆಯಾಗಿದ್ದ ಬಸವೇಶ್ವರ ದೇಗುಲದ ಅವಶೇಷಗಳು ಮತ್ತೆ ಗೋಚರವಾಗಿವೆ. ರಾಜ್ಯದಲ್ಲಿ ಭೀಕರ ಬರಗಾಲ ಎದುರಾಗಬಹುದು ಎಂಬ ಚರ್ಚೆಯ ನಡುವೆಯೇ ಈ ವಿದ್ಯಮಾನ ಕಂಡುಬಂದಿರುವುದು ಆತಂಕಕ್ಕೆ ಕಾರಣವಾಗಿದೆ. ಕಬಿನಿ ಜಲಾಶಯದಲ್ಲಿ ನೀರಿನ ಮಟ್ಟ ತೀವ್ರವಾಗಿ ಕುಸಿದಿರುವುದರಿಂದ ದೇವಸ್ಥಾನದ ಕಲ್ಲುಮಂಟಪದ ಭಾಗಗಳು ಕಾಣಿಸಿಕೊಂಡಿವೆ. ಸ್ಥಳೀಯರ ಪ್ರಕಾರ, 15 ವರ್ಷಗಳ ಹಿಂದೆ ಇದೇ ರೀತಿಯ ಪರಿಸ್ಥಿತಿ ಎದುರಾದಾಗಲೂ ದೇಗುಲದ ಅವಶೇಷಗಳು ಗೋಚರಿಸಿದ್ದವು. ಮುಂಗಾರು ಮಳೆ ಕಡಿಮೆಯಾಗಿ ಒಳಹರಿವಿನ ಪ್ರಮಾಣ ಇಳಿಮುಖವಾದಾಗಲೆಲ್ಲಾ ಈ ದೇಗುಲದ ಭಾಗಗಳು ಕಾಣಿಸಿಕೊಳ್ಳುತ್ತವೆ ಅಂತಾರೆ.

### ಜಲಾಶಯದಲ್ಲಿ ಮುಚ್ಚಿಹೋಗಿದ್ದ ಊರು ಯಾವುದು?



2013ರಲ್ಲಿ ಮಾಂಕಾಳಮ್ಮ ಮತ್ತು ಭವಾನಿಶಂಕರ ದೇವಾಲಯಗಳು ಪ್ರತ್ಯಕ್ಷವಾಗಿದ್ದವು. ಇದರ ಇತಿಹಾಸ ಕೆದಕಿದಾಗ ಜಲಾಶಯದ ನೀರಿನಲ್ಲಿ ಹುದುಗಿಹೋಗಿದ್ದ ಊರು ಪತ್ತೆಯಾಗಿತ್ತು. ಈ ಎರಡು ದೇಗುಲಗಳಿದ್ದ ಆ ಊರೇ ಕಿತ್ತೂರು. ಇಲ್ಲಿರುವ ಮಾಂಕಾಳಮ್ಮ ದೇವಿಯು ವೈಷ್ಣವ ದೇವತೆಯಾಗಿದ್ದು, ಕೇರಳದಿಂದ ಬಂದು ಕಿತ್ತೂರಿನಲ್ಲಿ ನೆಲೆಸಿದಳು ಎಂದು ಹೇಳಲಾಗಿದೆ. ಮೊದಲು ಈ ಊರು ಕೀರ್ತಿಪುರವಾಗಿತ್ತಂತೆ. ನಂತರ ಇದು ಕಿತ್ತೂರು ಆಯಿತೆಂಬ ಮಾತುಗಳಿವೆ. ಅಂದಿನ ಕಾಲದಲ್ಲಿ ಕಿತ್ತೂರು ಸಂಪದ್ಭರಿತ ಗ್ರಾಮವಾಗಿತ್ತಂತೆ. ಇಲ್ಲಿನ ಸಾಮಂತರು ಹತ್ತೂರು ಕೊಟ್ಟರೂ ಕಿತ್ತೂರು ಕೊಡುವುದಿಲ್ಲ ಎನ್ನುವಷ್ಟರ ಮಟ್ಟಿಗೆ ಶ್ರೀಮಂತ ಗ್ರಾಮವಾಗಿತ್ತು. ನಂತರ ಕಿತ್ತೂರು ಮೈಸೂರಿನ ಯದುವಂಶಸ್ಥರ ಆಳ್ವಿಕೆಗೆ ಒಳಪಟ್ಟಿತ್ತು. ಇಲ್ಲಿರುವ ದೇಗುಲಗಳನ್ನು ಆಗಿನ ರಾಜರ ಕಾಲದಲ್ಲಿ ನಿರ್ಮಿಸಲಾಗಿದೆ.

ಹೀಗೆಯೇ ಮಳೆ ಬಾರದೆ ಹೋದರೆ ಮತ್ತೊಮ್ಮೆ ಹುದುಗಿಹೋಗಿರುವ ಊರನ್ನು ನೋಡಬಹುದೇನೋ. ಅವಾಗ ಇನ್ಯಾವ ದೇವರ ವಿಗ್ರಹಗಳು ಪತ್ತೆಯಾಗಿ ಮತ್ಯಾವ ಊರು ಗೋಚರಿಸುತ್ತೋ ಗೊತ್ತಿಲ್ಲ. ಸದ್ಯ ಅಂತಹ ಪರಿಸ್ಥಿತಿ ಹೆಚ್ ಡಿ ಕೋಟೆ ಮತ್ತು ಸರಗೂರು ತಾಲೂಕಿನ ಜನರಿಗೆ ಬಾರದಿರಲಿ. ಮಳೆ ಬಂದು ಜಲಾಶಯ ಭರ್ತಿಯಾಗಲಿ, ರೈತರ ಮುಖದಲ್ಲಿ ಮಂದಹಾಸ ಕಂಡುಬರಲಿ ಎಂಬುದೇ ಎಲ್ಲರ ಆಶಯ.

# ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಗೆ ಹೃದಯಾಘಾತ: ವೈದೇಹಿ ಆಸ್ಪತ್ರೆಗೆ ಸಿಎಂ ಡಿಕೆ ಶಿವಕುಮಾರ್ ಭೇಟಿ



ಬೆಂಗಳೂರು: ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕ ಇಕ್ಬಾಲ್ ಹುಸೇನ್ ಅವರಿಗೆ ಹೃದಯಾಘಾತ ಸಂಭವಿಸಿದೆ. ಕೂಡಲೇ ಅವರನ್ನು ಬೆಂಗಳೂರಿನ ವೈದೇಹಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ ಎಂಬ ಮಾಹಿತಿ ಲಭ್ಯವಾಗಿದೆ.

ಸದ್ಯದ ಮಾಹಿತಿ ಪ್ರಕಾರ, ಇಕ್ಬಾಲ್ ಹುಸೇನ್ ಚಿಕಿತ್ಸೆಗೆ ಸ್ಪಂದಿಸುತ್ತಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಆಸ್ಪತ್ರೆಗೆ ಭೇಟಿ ನೀಡಿ, ಆರೋಗ್ಯ ವಿಚಾರಿಸಿದ್ದಾರೆ.

ನಿರಂತರವಾಗಿ ಹಲವು ತಿಂಗಳಿಂದ, ಪಕ್ಷದ ವಿರೋಧದ ನಡುವೆಯೂ, ಶಾಸಕ ಇಕ್ಬಾಲ್ ಹುಸೇನ್ ಡಿಕೆ ಶಿವಕುಮಾರ್ ಅವರೇ ಸಿಎಂ ಆಗುತ್ತಾರೆ ಎಂದು ಬಹಿರಂಗವಾಗಿ ಹೇಳಿಕೆ ಕೊಡುತ್ತಾ ಬಂದಿದ್ದರು.

# ಕಾಲೇಜಿನ ಮೇಲ್ಛಾವಣಿ ಕುಸಿದು ವಿದ್ಯಾರ್ಥಿನಿಯರಿಗೆ ಗಾಯ ಗುತ್ತಿಗೆದಾರರ ಮೇಲೆ ಪ್ರಕರಣ ದಾಖಲಿಸಲು ಆಗ್ರಹಿಸಿ ಎಬಿವಿಪಿ ಪ್ರತಿಭಟನೆ



ಕಲಬುರಗಿ:ನಗರದ ಸರ್ಕಾರಿ ಬಾಲಕಿಂ–ಯರ ಪದವಿ ಪೂರ್ವ ಕಾಲೇಜಿನ ಮೇಲ್ಛಾವಣಿ ಕುಸಿದು ಬಿದ್ದು ಘಟನೆ ವಿರುದ್ಧ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಜಿಲ್ಲಾ ಘಟಕದ ವತಿಯಿಂದ ಕಾಲೇಜಿನ ಮುಂದೆ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಹಾಗೂ ಶಿಕ್ಷಣ ಇಲಾಖೆಯ ಅವರಿಗೆ ಪೊಲೀಸ್ ಇಲಾಖೆ ಮುಖಾಂತರ ಮನವಿ ಸಲ್ಲಿಸಲಾಯಿತು.

ನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ತರಗತಿ ನಡೆಸುತ್ತಿದ್ದಾಗಲೇ ಮೇಲ್ಛಾವಣಿ ಕುಸಿದು ಬಿದ್ದು ವಿದ್ಯಾರ್ಥಿನಿಯರು ಗಂಭೀರ ಗಾಯಗೊಂಡ ಆಸ್ಪತ್ರೆಯ ಸೇ–ರಿದ್ದಾರೆ. ಸರ್ಕಾರಿ ಕಾಲೇಜು ಕಟ್ಟಡದ ದುಸ್ಥಿತಿಯಿಂದಾಗಿ ಸುಮಾರ 2000ಕ್ಕೂ ಹೆಚ್ಚು ಬಡ ವಿದ್ಯಾರ್ಥಿನಿಯರ ಪ್ರತಿದಿನ ಆತಂಕದಲ್ಲೇ ಕಲಿಯುವಂತಾಗಿದೆ. ಈಗಾಗಲೇ ತರಗತಿಗಳ ಮೇಲ್ಛಾವಣಿ ಕುಸಿದಿದ್ದು, ಇಡೀ ಕಾಲೇಜಿನ ಕಟ್ಟಡ ಬಿರುಕು ಬಿಟ್ಟಿದೆ. ರಾಜ್ಯ ಸರ್ಕಾರಕ್ಕೆ ಶಿಕ್ಷಣದ ಬಗ್ಗೆ ಯಾಕಿಷ್ಟು ನಿರ್ಲಕ್ಷ್ಯ ,ಅಧಿಕಾರಗಳ ಬೇಜವಾಬ್ದಾ–ರಿಗೆ ವಿದ್ಯಾರ್ಥಿನಿಯರ ಜೀವ ಬಲಿಯಾಗಬೇಕೇ ರಾಜ್ಯದಲ್ಲಿ ಶಾಲಾ ಕಾಲೇಜುಗಳು ಪ್ರಾರಂಭವಾಗಿವೆ. ಆದರೆ ವಿದ್ಯಾರ್ಥಿಳಿಗೆ ಪಾಠ ಕೇಳುವುದಕ್ಕೆ ಕೊಠಡಿಯಗಳಿಲ್ಲ, ಮೂಲಭೂತ ಸೌಕರ್ಯ ಕೇಳವುಬೇಡ. ಆ ಮಟ್ಟಕ್ಕೆ ಶಾಲಾ ಕಾಲೇಜುಗಳು ಪರಿಸಿತ್ಥಿ ಇದೆ. ರಾಜ್ಯದಲ್ಲಿ 1,200ಕ್ಕೂ ಹೆಚ್ಚು ಸರ್ಕಾರಿ ಪದವಿ ಪೂರ್ವ ಕಾಲೇಜಿಗಳ ಪರಿಸಿತ್ಥಿ ಒಮ್ಮೆ ಮುಖ್ಯಮಂತ್ರಿಯವರು ನೋಡಬೇಕು ಇದಕ್ಕೆ ಈ ಕಟ್ಟಡದ ಗುತ್ತಿಗೆದಾರ ಮೇಲೆ ಪ್ರಕರಣ ದಾಖಲಿಸಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಹಾಗೂ ಜಿಲ್ಲಾಡಳಿತ ಹಾಗೂ ಶಿಕ್ಷಣ ಇಲಾಖೆ ಕೂಡಲೇ ಎಚ್ಚೆತ್ತುಕೊಂಡು ಕಟ್ಟಡ ಪರಿಶೀಲಿಸಿ ವಿದ್ಯಾರ್ಥಿನಿಯರ ಸುರಕ್ಷತೆಗೆ ತಕ್ಷಣ ಕ್ರಮ ಕೈಗೊಳ್ಳುಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಎಬಿವಿಪಿ ರಾಜ್ಯಕಾರ್ಯಕಾರಣಿ ಸದಸ್ಯರಾದ ಶ್ರವಣ,ರಾಜ್ಯ ಕಾರ್ಯ ಕಾರಣಿ ಸದಸ್ಯರಾದ ಸಿದ್ದಲಿಂಗ ತಳವಾರ,ಕುಮಾರಿ ನಂದಾ ನಗರ ವಿದ್ಯಾರ್ಥಿನಿ ಪ್ರಮುಖ ,ಹೋರಾಟ ಪ್ರಮುಖರಾದ ಅವಿನಾಶ ಗುತ್ತಿದಾರ, ಶಿವು ಸಜ್ಜನ, ಅಭಿಷೇಕ ಪಾಟೀಲ್,ಸಂದೇಶ,ರಾಚಪ್ಪ ಹಾಗೂ ಕಾಲೇಜಿನ ವಿದ್ಯಾರ್ಥಿನಿಯರು ಇದ್ದರು.

# ಉಚಿತ ತೊಗರಿ ಹಾಗೂ ಉದ್ದು ಬೀಜಗಳ ವಿತರಣೆ: ರೈತರ ಆತ್ಮನಿರ್ಭರತೆಗೆ ಮತ್ತೊಂದು ಹೆಜ್ಜೆ



ಕಲಬುರಗಿ: ತಾಲೂಕಿನ ರೈತರಿಗೆ ಕೃಷಿ ಇಲಾಖೆಯಿಂದ ಸಿಹಿಸುದ್ದಿ ದೊರೆತಿದ್ದು, 2026–27ನೇ ಸಾಲಿನ ದ್ವಿದಳ ಧಾನ್ಯಗಳ ಆತ್ಮನಿರ್ಭರ ಪಲ್ಸ ಅಭಿಯಾನ ಯೋಜನೆ ಅಡಿಯಲ್ಲಿ ಉಚಿತ ತೊಗರಿ ಹಾಗೂ ಉದ್ದು ಮಿನಿಕೀಟ್ ಬೀಜಗಳ ವಿತರಣಾ ಕಾರ್ಯಕ್ರಮ ಹಾಗೂ ರಾಷ್ಟ್ರೀಯ ಆಹಾರ ಭದ್ರತೆ ಯೋಜನೆ ಆಡಿಯೆಲ್ಲಿ ತೊಗರಿ ಪ್ರಾತ್ಯಕ್ಷಿಕೆ ಬಿತ್ತನೆ ಬೀಜಗಳ್ ವಿತರಣೆ ಕಾರ್ಯಕ್ರಮ ಕಲಬುರಗಿ ತಾಲೂಕಿನ ಪಟ್ಟಣ ಗ್ರಾಮದಲ್ಲಿರುವ ರೈತ ಸಂಪರ್ಕ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಯಿತು.

ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ರೈತರಿಗೆ ಉಚಿತ ತೊಗರಿ ಹಾಗೂ ಉದ್ದು ಮಿನಿಕೀಟ್ ಪ್ರತ್ಯಕ್ಷಕೆ ಬೀಜಗಳನ್ನು ವಿತರಿಸಿ ಮಾತನಾಡಿದರು. ಕೃಷಿ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ಹಲವು ಜನಪರ ಯೋಜನೆಗಳನ್ನು ಜಾ–ರಿಗೆ ತರುತ್ತಿದ್ದು, ರೈತರು ಅವುಗಳ ಸದುಪಯೋಗ ಪಡೆದುಕೊಂಡು ಉತ್ಪಾದನೆ ಹೆಚ್ಚಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆ ಕಲಬುರಗಿ ವತಿಯಿಂದ ಆಯೋಜಿಸಲಾದ ಈ ಕಾರ್ಯಕ್ರಮದಲ್ಲಿ ರೈತರಿಗೆ ಗುಣಮಟ್ಟದ ತೊಗರಿ ಬೀಜಗಳನ್ನು ವಿತರಿಸಲಾಯಿತು. ದ್ವಿದಳ ಧಾನ್ಯಗಳ ಉತ್ಪಾದನೆ ಹೆಚ್ಚಿಸುವುದು ಹಾಗೂ ರಾಜ್ಯವನ್ನು ಈ ಕ್ಷೇತ್ರದಲ್ಲಿ ಸ್ವಾವಲಂಬಿಯನ್ನಾಗಿಸುವ ಉದ್ದೇಶದಿಂದ ಆತ್ಮನಿರ್ಭರ ಪಲ್ಸ ಅಭಿಯಾನ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು.

ರೈತರು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು ಹಾಗೂ ಉತ್ತಮ ಇಳುವರಿ ಪಡೆಯಲು ಕೃಷಿ ಇಲಾಖೆಯ ತಜ್ಞರ ಸಲಹೆಗಳನ್ನು ಅನುಸರಿಸಬೇಕು ಎಂದು ಕಾರ್ಯಕ್ರಮದಲ್ಲಿ ಮಾರ್ಗದರ್ಶನ ನೀಡಲಾಯಿತು.

ಕಾರ್ಯಕ್ರಮದಲ್ಲಿ ಜಂಟಿ ಕೃಷಿ ನಿರ್ದೇಶಕರಾದ ಸಮದ್ ಪಟೇಲ್, ಸಹಾಯಕ ಕೃಷಿ ನಿರ್ದೇಶಕರು ಅರುಣ ಕುಮಾರ ಮೂಲಿಮನಿ ಮುಖಂಡರಾದ ದಶರಥ ಬಾಬು ಒಂಟಿ, ಸಂತೋಷ್ ಪಾಟೀಲ್ ಡನ್ನೂರ್, ಲಿಂಗರಾಜ್ ಕಣ್ಣಿ, ಬಸವರಾಜ್ ಶರಣಪ್ಪ ಜೀವಣಗಿ, ಅಂಬರಾಯ ಸೇರಿದಂತೆ ರೈತರು ಹಾಗೂ ಕೃಷಿ ಇಲಾಖೆ ಯ ಅಧಿಕಾರಿಗಳಾದ ಶ್ರೀದೇವಿ ಹಜೇರಿ, ಅಜಯ ಬಿ, ಶಿವರಾಯ, ಕಾಶಿರಾಯ ಉಪಸ್ಥಿತರಿದ್ದರು.

"ಉತ್ತಮ ಬೀಜ , ಅಧಿಕ ಇಳುವರಿ" ಎಂಬ ಧ್ಯೇಯದೊಂದಿಗೆ ನಡೆದ ಈ ಕಾರ್ಯಕ್ರಮ ರೈತರಲ್ಲಿ ಹೊಸ ಉತ್ಸಾಹ ಮೂಡಿಸಿತು.

# ಬೀದರ್ ಜಿಲ್ಲೆಯ ಪಿ.ಎಚ್.ಡಿ ವಿದ್ಯಾರ್ಥಿಗಳ ಅಂತಾರಾಷ್ಟ್ರೀಯ ಸಾಧನೆ

ಬೀದರ:ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಜೂನ್ 5ರಂದು ಥಾಯ್ಲೆಂಡ್‌ನ ಬ್ಯಾಂಕಾಕ್‌ನಲ್ಲಿರುವ ಏಷ್ಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಂಖಿ)ಯಲ್ಲಿ ನಡೆದ ಪ್ರತಿಷ್ಠಿತ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ರಾಯಚೂ–ರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಸಂಶೋಧನಾ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿ ವಿಶ್ವವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ.ಈ ಸಮ್ಮೇಳನದಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರನ್ನು ಪ್ರತಿನಿಧಿಸಿದ್ದ, ಬೀದರ್ ಜಿಲ್ಲೆಯ ಬೀದರ್ ತಾಲೂಕಿನ ಗುಮ್ಮ ಗ್ರಾಮದ ಪಿ.ಎಚ್.ಡಿ. ಸಂಶೋಧನಾ ವಿದ್ಯಾರ್ಥಿ ಅಂಕೇಶ ತಂದೆ ಶಂಕರ ಅವರು ತಮ್ಮ ಸಂಶೋಧನಾ ಕಾರ್ಯಕ್ಕಾಗಿ "ಅತ್ಯುತ್ತಮ ಸಂಶೋಧನಾ ವಿದ್ವಾಂಸ ಪ್ರಶಸ್ತಿ–2026" ಪ್ರಶಸ್ತಿಯನ್ನು ಪಡೆದಿದ್ದಾರೆ.

# ವಿದ್ಯಾರ್ಥಿ ಸವಾರ್ಂಗೀಣ ಅಭಿವೃದ್ಧಿಗೆ ಪಠ್ಯ ಚಟುವಟಿಕೆ ಜೊತೆಗೆ ಪಠ್ಯೇತರ, ಸಾಂಸ್ಕೃತಿಕ ಚಟುವಟಿಕೆ ಸಹ ಅತ್ಯಂತ ಅವಶ್ಯಕ



ಬೀದರ : ವಿದ್ಯಾರ್ಥಿಗಳ ಸವಾರ್ಂಗೀಣ ಅಭಿವೃದ್ಧಿಗೆ ಪಠ್ಯ ಚಟುವಟಿಕೆಗಳ ಜೊತೆಗೆ ಪಠ್ಯೇತರ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳು ಸಹ ಅತ್ಯಂತ ಅವಶ್ಯಕವಾಗಿವೆ ಎಂದು ಬೀದರ ತೋಟಗಾರಿಕೆ ಮಹಾವಿದ್ಯಾಲಯ ಡೀರಾದ ಡಾ. ಎಸ್.ವಿ.ಪಾಟೀಲ್ ಅವರು ಹೇಳಿದರು.

ಬೀದರ ತೋಟಗಾರಿಕೆ ಮಹಾವಿದ್ಯಾಲಯ ಹಾಗೂ ಬಾಗಲಕೋಟನ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಇತ್ತೀಚಿನ

ಮಹಾವಿದ್ಯಾಲಯದ 18ನೇ ವಾರ್ಷಿಕೋತ್ಸವ ಹಾಗೂ ವಿದ್ಯಾರ್ಥಿಗಳ ವಸತಿ ನಿಲಯಗಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಾರ್ಷಿಕೋತ್ಸವವು ವಿದ್ಯಾರ್ಥಿಗಳ ಸಾಂಸ್ಕೃತಿಕ ಪ್ರತಿಭೆಗಳನ್ನು ಅನಾವರಣಗೊಳಿಸುವ ವೇದಿಕೆಯಾಗಿದ್ದು, ಶೈಕ್ಷಣಿಕ ಸಾಧನೆಗಳೊಂದಿಗೆ ನಾಯಕತ್ವ, ಸಾಮಾಜಿ–ಕ ಜವಾಬ್ದಾರಿ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾಗಿದೆ ಎಂದು ಅಭಿಪ್ರಾಯಪಟ್ಟರು. ಮುಂದುವರೆದು, ಪ್ರತಿಯೊಬ್ಬ ವಿದ್ಯಾರ್ಥಿಗಳಲ್ಲಿ ಒಂದು ವಿಶೇಷ ಸಾಮರ್ಥ್ಯವಿದೆ. ಅದನ್ನು ಸರಿಯಾದ ರೀತಿಯಲ್ಲಿ ಸದ್ಬಳಕೆ ಮಾಡಿಕೊಂಡು, ತೋಟಗಾರಿಕೆ ಕ್ಷೇತ್ರದಲ್ಲಿ ನವೀನ ತಂತ್ರಜ್ಞಾನಗಳ ಅಳವಡಿಕೆ, ಸಂಶೋಧನೆ ಹಾಗೂ ವಿಸ್ತರಣಾ ಚಟುವಟಿ–ಕೆಗಳ ಮೂಲಕ ಕೃಷಿ ಮತ್ತು ತೋಟಗಾರಿಕೆ ಕ್ಷೇತ್ರದ ಅಭಿವೃದ್ಧಿಗೆ ವಿದ್ಯಾರ್ಥಿಗಳು ತಮ್ಮ ಅಮೂಲ್ಯ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು. ವಿದ್ಯಾರ್ಥಿಗಳು ಶಿಸ್ತು, ಸಮರ್ಪಣೆ ಮತ್ತು ಪರಿಶ್ರಮದ ಮೂಲಕ ತಮ್ಮ ಭವಿಷ್ಯವನ್ನು ಉಜ್ವಲಗೊಳಿಸಿಕೊಳ್ಳಬೇಕೆಂದು ಕಿವಿ ಮಾತನ್ನು ಹೇಳಿದರು.

ಕಲಬುರಗಿಕೃಷಿಮಹಾವಿದ್ಯಾಲಯಮುಖ್ಯಅತಿಥಿಗಳು ಹಾಗೂ ವಿಶ್ರಾಂತ ಡೀನ್ ಅವರು ಮಾತನಾಡಿ, ವಿದ್ಯಾರ್ಥಿ ಜೀವನವು ವ್ಯಕ್ತಿತ್ವ ನಿರ್ಮಾಣದ ಪ್ರಮುಖ ಹಂತವಾಗಿದ್ದು, ಶಿಕ್ಷಣದ ಜೊತೆಗೆ ಶಿಸ್ತು, ನೈತಿಕ ಮೌಲ್ಯಗಳು ಮತ್ತು ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳುವುದು ಅಗತ್ಯವೆಂದು ತಿಳಿಸಿದರು. ಕೃಷಿ ಹಾಗೂ ತೋಟಗಾರಿಕೆ ಕ್ಷೇತ್ರವು ದೇಶದ ಆರ್ಥಿಕ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದು, ವಿದ್ಯಾರ್ಥಿಗಳು ಆಧುನಿಕ ತಂತ್ರಜ್ಞಾನ, ಸಂಶೋಧನೆ ಮತ್ತು ನವೀನ ಆವಿಸ್ಕಾರಗಳನ್ನು ಅಳವಡಿಸಿಕೊಳ್ಳುವ ಮೂಲಕ ಮಹಾವಿದ್ಯಾಲಯದಲ್ಲಿ ಶಿಕ್ಷಕರು ನೀಡಿದ ಜ್ಞಾನವನ್ನು ಉತ್ತಮ ರೀತಿಯಲ್ಲಿ ವಿವೇಕದಿಂದ ಉಪಯೋಗಿಸಿಕೊಂಡು ದಕ್ಷತೆ, ಪ್ರಾಮಾಣಿಕತೆಯಿಂದ ರೈತ ಸಮುದಾಯದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮಹಾವಿದ್ಯಾಲಯದ ಕೀರ್ತಿಯನ್ನು ನಾಡಿನಾದ್ಯಂತ ಪಸರಿಸಬೇಕೆಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಮುಂದುವರೆದು, ವಿದ್ಯಾರ್ಥಿಗಳು ಪಠ್ಯ ಚಟುವಟಿ–ಕೆಗಳೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ಭಾಗವಹಿಸುವುದರಿಂದ ಆತ್ಮವಿಶ್ವಾಸ ಮತ್ತು ನಾಯಕತ್ವ ಕೌಶಲ್ಯಗಳು ವೃದ್ಧಿಯಾಗುತ್ತವೆ, ದೇಶದ ಭವಿಷ್ಯವನ್ನು ರೂಪಿಸುವ ಜವಾಬ್ದಾರಿ ಯುವಜನತೆಯ ಮೇಲಿದೆ ಎಂದು ಸ್ಫೂರ್ತಿದಾಯಕ ಮಾತುಗಳನ್ನಾಡಿ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಿದರು.

ಡಾ: ಎಸ್. ವಿ. ಪಾಟೀಲ, ತೋಟಗಾರಿಕೆ ಮಹಾವಿದ್ಯಾಲಯ, ಬೀದರ, ಡಾ: ಮೊಹಮ್ಮದ್ ಫಾರೂಕ, ಪ್ರಾಧ್ಯಾಪಕರು, ವಿದ್ಯಾರ್ಥಿಗಳ ವಸತಿ ನಿಲಯಗಳ ನಿಲಯ ಪಾಲಕರುಗಳಾದ ಶ್ರೀ. ಆಂಜನೇಯ, ಶ್ರೀಮತಿ ಜಾನವಿ ಡಿ.ಆರ್. ಮತ್ತು ವಸತಿ ನಿಲಯಗಳ ಪದಾಧಿಕಾ–ರಿಗಳು 2025–26 ನೇ ಶೈಕ್ಷಣಿಕ ಸಾಲಿನ ತೋಟಗಾ–ರಿಕೆ ಮಹಾವಿದ್ಯಾಲಯ ಹಾಗೂ ವಸತಿ ನಿಲಯಗಳ ವಾರ್ಷಿಕೋತ್ಸವದ ನಿಮಿತ್ತ ರಚಿಸಲಾದ "ಸಂಭ್ರಮ" ಎಂಬ ಸ್ಮರಣ ಸಂಚಿಕೆ–2026 ನ್ನು ಲೋಕಾರ್ಪಣೆಗೊಳಿಸಿದರು. ವಾರ್ಷಿಕೋತ್ಸವ ನಿಮಿತ್ತ ಹಮ್ಮಿಕೊಂಡಿರುವ ವಿವಿಧ ಕ್ರೀಡೆ, ಸಾಂಸ್ಕೃತಿಕ ಹಾಗೂ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪದಕ ಹಾಗೂ ಪ್ರಶಸ್ತಿ ಪತ್ರಗಳನ್ನು ಗಣ್ಯ–ರಿಂದ ವಿತರಿಸಲಾಯಿತು.

ಈ ಕಾರ್ಯಕ್ರಮವನ್ನು ಕು.ಕೀರ್ತಿ ಮತ್ತು –ವಿಜಯಲಕ್ಷ್ಮಿ??, ತೃತಿಯ ವರ್ಷದ ವಿದ್ಯಾರ್ಥಿನಿಯರು ನಡೆಸಿಕೊಟ್ಟರು. ತದನಂತರ ಸರೆಗಮ ವಿಜೇತರು ಹಾಗೂ ಇಂಡಿಯನ್ ಐಡಿಯಲ್ ಪ್ರಶಸ್ತಿ ಪಡೆದ ಕು. ಶಿವಾನಿ ಶಿವದಾಸ ಸ್ವಾಮಿ ಹಿರೇಮಠ ಮತ್ತು ಸಂಗೀತ ರತ್ನ ಶ್ರೀ ಶಿವದಾಸ ಸ್ವಾಮಿಯವರು ಸಂಗೀತ ರಸಮಂಜರಿ ಕಾರ್ಯಕ್ರಮ ನಡೆಸುವ ಮೂಲಕ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದರು. ವಿದ್ಯಾರ್ಥಿಗಳು ವಿವಿಧ ಸಾಂಸ್ಕೃತಿ–ಕ ಕಾರ್ಯಕ್ರಮಗಳಾದ ಭರತ ನಾಟ್ಯ, ದೇಶ ಭಕ್ತಿಗೀತೆ, ನಾಟಕ, ಏಕಾಭಿನಯ ಹಾಗೂ ಇನ್ನಿತರೆ ಅತ್ಯುತ್ತಮ ಮನರಂಜನಾ ಕಾರ್ಯಕ್ರಮಗಳನ್ನು ನಡೆಸುವುದರ ಮುಖೇನ ಪ್ರೇಕ್ಷಕರನ್ನು ರಂಜಿಸಿದರು.

ಈ ಸಂದರ್ಭದಲ್ಲಿ ಡಾ. ಮೊಹಮ್ಮದ್ ಫಾರೂಕ ಪ್ರಾಧ್ಯಾಪಕರು, (ತೋಟ ಪಟ್ಟಿ ಬೆಳೆಗಳ ವಿಭಾಗ) ಮತ್ತು ಸಿಬ್ಬಂದಿ ಸಲಹೆಗಾರರು, ಡಾ. ಶ್ರೀನಿವಾಸ ಎನ್. ಪ್ರಾಧ್ಯಾಪಕರು, ಡಾ. ರಾಜಕುಮಾರ ಎಮ್. ಸಹ ಪ್ರಾಧ್ಯಾಪಕರು ಮತ್ತು ಸಹಾಯಕ ವಿದ್ಯಾರ್ಥಿ ಕಲ್ಯಾಣ ನಿರ್ದೇಶಕರು, ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಗಳು, ಸೂರ್ಯ ವಿದ್ಯಾರ್ಥಿಗಳ ವಸತಿ ನಿಲಯ ಸಂಘದ ಪ್ರತಿನಿಧಿಗಳಾದ ಮನೋಜ ಪಾಟೀಲ, ಪ್ರಧಾನ ಕಾರ್ಯದರ್ಶಿ, ಅಲೋಕ ಪಾಟೀಲ, ಜಂಟಿ ಮತ್ತು ಕ್ರೀಡಾ ಕಾರ್ಯದರ್ಶಿ, ಭಗವಂತರಾಯ, ಭೋಜನಾಲಯ ಕಾರ್ಯದರ್ಶಿ, ಹರ್ಷಕುಮಾರ ಆರೋಗ್ಯ ಕಾರ್ಯದರ್ಶಿ ಆಯುಷ ಶ್ರೀವಾತ್ಸವ, ಸಾಂಸ್ಕೃತಿ ಕಾರ್ಯದರ್ಶಿ ಮತ್ತು ವಿಜಯಾ ವಿದ್ಯಾರ್ಥಿನಿಯರ ವಸತಿ ನಿಲಯ ಸಂಘದ ಪ್ರತಿನಿಧಿಗಳಾದ ದಿವ್ಯಾ ಉಪ್ಪೆ, ಪ್ರಧಾನ ಕಾರ್ಯದರ್ಶಿ, ಕೀರ್ತಿ, ಜಂಟಿ ಕಾರ್ಯದರ್ಶಿ, ವೈಷ್ಣವಿ, ಭೋಜನಾಲಯ ಕಾರ್ಯದರ್ಶಿ, ಸಾನಿಯಾ, ಅಧ್ಯಯನ ಕಾರ್ಯದರ್ಶಿ, ಕವಿತಾ, ಆರೋಗ್ಯ ಕಾರ್ಯದರ್ಶಿ, ಸಂಜನಾ, ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯದರ್ಶಿ ಹಾಗೂ ತರಗತಿವಾರು ವರ್ಗ ಪ್ರತಿನಿಧಿಗಳಾದ ಬಸವರಾಜ ರೇಷ್ಮೆ ಮತ್ತು ದೀಪಿಕಾ, ದ್ವಿತಿಯ ವರ್ಷ, ಅಲೋಕ ಪಾಟೀಲ ಮತ್ತು ಜಯಶ್ರೀ, ತೃತೀಯ ವರ್ಷ, ಮನೋಜ ಪಾಟೀಲ ಮತ್ತು ಸಂಜನಾ, ಅಂತಿಮ ವರ್ಷ ಮತ್ತು ಇನ್ನಿತರೆ ವಿದ್ಯಾರ್ಥಿಗಳು ವಿವಿಧ ಸಮಿತಿಗಳಲ್ಲಿ ಅಚ್ಚುಕಟ್ಟಾಗಿ ವ್ಯವಸ್ಥೆಗೊಂಡು ಕಾರ್ಯಕ್ರಮಲ್ಲಿ ಸಕ್ರೀಯವಾಗಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕಾರಣೀಭೂತರಾದರು. ಕು.ದಿವ್ಯಾ ಮತ್ತು ಐಶ್ವರ್ಯ, ಅಂತಿಮ ವರ್ಷದ ವಿದ್ಯಾರ್ಥಿನಿಯರು ಮಹಾವಿದ್ಯಾಲಯದ ವಾರ್ಷಿಕ ವರದಿಯನ್ನು ಹಾಗೂ ಕು. ಮನೋಜ ಪಾಟೀಲ, ಪ್ರಧಾನ ಕಾರ್ಯದರ್ಶಿಗಳು ವಸತಿ ನಿಲಯಗಳ ವಾರ್ಷಿಕ ವರದಿಯನ್ನು ವಾಚನ ಮಾಡಿದರು. ಕು. ಪೂಜಾ ಮತ್ತು ಸಂಗಡಿಗರು ಭರತನಾಟ್ಯ ಮಾಡಿದರು. ಕು. ವೈಷ್ಣವಿ, ತೃತಿಯ ವರ್ಷ ವಿದ್ಯಾರ್ಥಿನಿ ಸ್ವಾಗತಿಸಿದರು, ಕು. ಸುಮಯ್ಯಾ, ತೃತಿಯ ವರ್ಷ ವಂದಿಸಿದರು. ಕು. ಫಲಕನಾಜ್ ಮತ್ತು ನಿತೀನ ಮಲ್ಲಿ ತೃತಿಯ ವರ್ಷದ ವಿದ್ಯಾರ್ಥಿಗಳು ಕಾರ್ಯಕ್ರಮವನ್ನು ನಿರೂಪಿಸಿದರು.

# ಮಾವು ಬೆಳೆ ಆಧುನಿಕ ತಂತ್ರಜ್ಞಾನ ಅಳವಡಿಕೆಗೆ ರೈತರು ಅನುಸರಿಸಿ



ಬೀದರ : ಮಾವು ಬೆಳೆಗಾರರು, ರೈತರು, ರೈತ ಮಹಿಳೆಯರು ಹಾಗೂ ಗ್ರಾಮೀಣ ಯುವಕರಿಗಾಗಿ "ಮಾವು ಬೆಳೆಯಲ್ಲಿ ಹೊಸ ತಂತ್ರಜ್ಞಾನಗಳು" ಅಳವಡಿಕೆಗೆ ರೈತರು ಅನುಸರಿಸಬೇಕು ಎಂದು ಕಲಬುರಗಿ ಕೃಷಿ ವಿಜ್ಞಾನ ಕೇಂದ್ರ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರು ಡಾ.ರಾಜು ಜಿ.ತೆಗ್ಗೆಳ್ಳಿ ಅವರು ಹೇಳಿದರು.

ಬಸವಕಲ್ಯಾಣ ತಾಲ್ಲೂಕಿನ ಹಳ್ಳಿ ಗ್ರಾಮದ ರೈತ ಭವನದಲ್ಲಿ ಇತ್ತೀಚಿನ "ಖೇತಿ ಬಚಾವೋ ಅಭಿಯಾನ"ದ ಐಸಿಎಆರ್–ಕೃಷಿ ವಿಜ್ಞಾನ ಕೇಂದ್ರ(ಕೆವಿಕೆ),ಬೀದರ ಹಾಗೂ ಐ.ಐ.ಎಂ.ಆರ್.– ಅಮೃತವಾಹಿನಿ ರೈತ ಉತ್ಪಾದಕರ ಸಂಸ್ಥೆ (ಈಕಔ), ಖೇಳಗಿ ಸಂಯುಕ್ತಾಶ್ರಯದಲ್ಲಿ "ಮಾವು ಬೆಳೆಯಲ್ಲಿ ಹೊಸ ತಂತ್ರಜ್ಞಾನಗಳು" ಕುರಿತು ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮದಲ್ಲಿ ವಸ್ತು ಪ್ರದರ್ಶನ ಮಳಿಗೆ ಉದ್ಘಾಟಿಸುವ ಮೂಲಕ ಚಾಲನೆ ನೀಡಿದರು ಅವರು ಮಾತನಾಡಿದರು.

ಮಾವು ಬೆಳೆಗಾರರು, ರೈತರು, ರೈತ ಮಹಿಳೆಯರು ಹಾಗೂ ಗ್ರಾಮೀಣ ಯುವಕರಿಗಾಗಿ "ಮಾವು ಬೆಳೆಯಲ್ಲಿ ಹೊಸ ತಂತ್ರಜ್ಞಾನಗಳು" ಅಳವಡಿಕೆಗೆ ರೈತರು ಅನುಸ–ರಿಸಬೇಕು, ಬದಲಾಗುತ್ತಿರುವ ಹವಾಮಾನ ಪರಿಸ್ಥಿತಿಗೆ ಅನುಗುಣವಾಗಿ ಮಾವು ಬೆಳೆಯಲ್ಲಿ ವೈಜ್ಞಾನಿಕ ಹಾಗೂ ಆಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಉತ್ತಮ ಗುಣಮಟ್ಟದ ಸಸಿಗಳ ಆಯ್ಕೆ, ತೋಟದ ಸಮರ್ಪಕ ನಿರ್ವಹಣೆ, ನೀರು ಮತ್ತು ಪೋಷಕಾಂಶಗಳ ಸಮತೋಲನ ಬಳಕೆ, ಸಮಗ್ರ ಕೀಟ ನಿರ್ವಹಣೆ ಹಾಗೂ ಮಾರುಕಟ್ಟೆ ಸಂಪರ್ಕದ ಮಹತ್ವ ಕುರಿತು ರೈತರಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದ ಪ್ರಾಸ್ತಾವಿಕ ಭಾಷಣದಲ್ಲಿ ಬೀದರ ಕೆವಿಕೆ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರು ಡಾ.ರಾಜಶೇಖರ ಬಸನಾಯಕ್ ಅವರು ಮಾತನಾಡಿ, ಕೃಷಿ ವಿಜ್ಞಾನ ಕೇಂದ್ರದ ಉದ್ದೇಶ ವಿವರಗಳು ಖೇತಿ ಬಚಾವೋ ಅಭಿಯಾನದ ಮಹತ್ವ, ನೈಸರ್ಗಿಕ ಕೃಷಿ ಮತ್ತು ಸಾವಯವ ಕೃಷಿಯ ಅವಶ್ಯಕತೆ ಎಂದು ಹೇಳಿದರು.

ಕಲಬುರಗಿ ಕೃಷಿ ಮಹಾವಿದ್ಯಾಲಯ ಸಹಾಯಕ ಪ್ರಾಧ್ಯಾಪಕರು (ತೋಟಗಾರಿಕೆ) ಡಾ.ಮಹಾಂತೇಶ ಜೋಗಿ ಅವರು ಮಾತನಾಡಿ, ಮಾವು ಬೆಳೆಯ ಸುಧಾ–ರಿತ ಬೇಸಾಯ ಕ್ರಮಗಳು, ವಿವಿಧ ತಳಿಗಳ ಆಯ್ಕೆ, ಕೊಯ್ಲಿನ ನಂತರದ ನಿರ್ವಹಣೆ, ಶ್ರೇಣೀಕರಣ, ಪ್ಯಾಕಿಂಗ್ ಹಾಗೂ ಮೌಲ್ಯವರ್ಧನೆ ಕುರಿತು ಸಮಗ್ರ ಮಾಹಿತಿ ನೀಡಿದರು.

ಕಲಬುರಗಿ ವಲಯ ಕೃಷಿ ಸಂಶೋಧನಾ ಕೇಂದ್ರ ಹಿರಿಯ ವಿಜ್ಞಾನಿ (ಸಸ್ಯರೋಗಶಾಸ್ತ್ರ) ಡಾ.ಮಲ್ಲಿಕಾರ್ಜುನ ಕೆಂಗನಾಳ ಅವರು ಮಾತನಾಡಿ, ಮಾವು ಬೆಳೆಯಲ್ಲಿ ಸಮಗ್ರ ರೋಗ ನಿರ್ವಹಣೆ ಹಾಗೂ ರಫ್ತು ಗುಣಮಟ್ಟದ ಹಣ್ಣುಗಳ ಉತ್ಪಾದನೆಗೆ ಒತ್ತು ನೀಡುವಂತೆ ರೈತರಿಗೆ ಸಲಹೆ ನೀಡಿದರು.

ಬೀದರ ಕೃಷಿ ವಿಜ್ಞಾನ ಕೇಂದ್ರ ವಿಜ್ಞಾನಿ (ಮಣ್ಣು ವಿಜ್ಞಾನ) ಡಾ.ಚಂದ್ರಕಾಂತ ಅವರು ಮಾತನಾಡಿ, ಮಣ್ಣು ಮತ್ತು ನೀರಿನ ಪರೀಕ್ಷೆಯ ಮಹತ್ವ, ಸಮಗ್ರ ಪೋಷಕಾಂಶ ನಿರ್ವಹಣೆ ಹಾಗೂ ಮಣ್ಣಿನ ಸಾವಯವ ಇಂಗಾಲ ಹೆಚ್ಚಿಸುವ ತಂತ್ರಜ್ಞಾನಗಳ ಕುರಿತು ರೈತರಿಗೆ ವಿವರಿಸಿದರು.

ಕಲಬುರಗಿ ಜಿಎಟಿ ಸಹಾಯಕ ಆಯುಕ್ತರು ಡಾ.ಮಹೇಶ ಪಾಟೀಲ ಅವರು ಮಾತನಾಡಿ, ಬಸವಕಲ್ಯಾಣ ಮಾವಿಗೆ ವಿಶೇಷ ಒಡಿಂಗ್ ಹಾಗೂ ಮಾರುಕಟ್ಟೆ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವ ಅಗತ್ಯವನ್ನು ತಿಳಿಸಿದರು.

ಹೈದರಾಬಾದ್ ಐ.ಐ.ಎಂ.ಆರ್ ರೈತ ಉತ್ಪಾದಕರ ಸಂಸ್ಥೆ (ಎಪಿಓ) ಸಂಯೋಜಕರು ಅಶೋಕ ಸಜ್ಜನ್ ಅವರು ಮಾತನಾಡಿ, ರೈತ ಉತ್ಪಾದಕರ ಸಂಸ್ಥೆಗಳ ಮೂಲಕ ಸಮೂಹ ಮಾರಾಟ ಕೈಗೊಳ್ಳುವುದ–ರಿಂದ ರೈತರಿಗೆ ಉತ್ತಮ ಬೆಲೆ ಹಾಗೂ ಹೆಚ್ಚಿನ ಲಾಭ ದೊರೆಯುವ ಸಾಧ್ಯತೆಗಳ ಕುರಿತು ಮಾಹಿತಿ ನೀಡಿದರು.

ತರಬೇತಿಯಲ್ಲಿ ಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ತೋಟಗಳಲ್ಲಿ ಎದುರಾಗುತ್ತಿರುವ ವಿವಿಧ ಸಮಸ್ಯೆಗಳ ಕುರಿತು ತಜ್ಞರೊಂದಿಗೆ ಚರ್ಚಿಸಿ ಸೂಕ್ತ ಪರಿಹಾರಗಳನ್ನು ಪಡೆದುಕೊಂಡರು ಎಂದು ತಿಳಿಸಿದರು.

ಮಾವು ಬೆಳೆಯಲ್ಲಿ ಆಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವ ಮೂಲಕ ಉತ್ಪಾದಕತೆ ಮತ್ತು ಆದಾಯವನ್ನು ಹೆಚ್ಚಿಸಿಕೊಳ್ಳುವ ಕುರಿತು ರೈತ–ರಿಗೆ ಮಾರ್ಗದರ್ಶನ ನೀಡಲಾಯಿತು. ಬೀದರ ಐಸಿ–ಎಆರ್–ಕೃಷಿ ವಿಜ್ಞಾನ ಕೇಂದ್ರ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು ಡಾ.ರಾಜಶೇಖರ್ ಬಸನಾಯಕ್ ಮೊ. 9480696318, 9711330755ಗೆ ಕರೆ ಮಾಹಿತಿ ಪಡೆಯಬೇಕು ಎಂದು ಹೇಳಿದರು. ಇದೇ ವೇಳೆ ರೈತರೊಂದಿಗೆ ಸಂವಾದ ಮತ್ತು ರೈತರಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ರೈತರು, ರೈತ ಮಹಿಳೆಯರು, ಗ್ರಾಮೀಣ ಯುವಕರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಗಡಿ ಜಿಲ್ಲೆಯಲ್ಲಿ ಕನ್ನಡ ಬಳಕೆ ಕಡ್ಡಾಯ ಜಾರಿಗೆ ಒತ್ತು : ಎಡಿಸಿ ಶಿವಾನಂದ ಕರಾಳೆ ಕರೆ



ಬೀದರ್: ಜಿಲ್ಲೆಯ ವಿವಿಧ ಸರ್ಕಾರಿ ಇಲಾಖೆಗಳು ಹಾಗೂ ಸಾರ್ವಜನಿಕ ಸೇವಾ ಸಂಸ್ಥೆಗಳಲ್ಲಿ ಕನ್ನಡ ಭಾಷೆಯ ಬಳಕೆಯನ್ನು ಮತ್ತಷ್ಟು ವಿಸ್ತರಿಸುವ ಅಗತ್ಯವಿದ್ದು, ಸರ್ಕಾರದ ನಿಯಮಾನುಸಾರ ಶೇ.60ರಷ್ಟು ಕನ್ನಡ ಬಳಕೆಯನ್ನು ಕಡ್ಡಾಯವಾಗಿ ಜಾರಿಗೊಳಿಸಲು ಕ್ರಮ ಕೈಗೊಳ್ಳಬೇಕಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಕಾರಳೆ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಜಿಲ್ಲಾ ಕನ್ನಡ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕನ್ನಡದ ಬಳಕೆ ಕುರಿತು ಈಗಾಗಲೇ ವಿವಿಧ ರೀತಿಯ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಆದರೂ ಇನ್ನೂ ಕೆಲವು ಇಲಾಖೆಗಳಲ್ಲಿ ಕನ್ನಡದ ಬಳಕೆ ನಿರೀಕ್ಷಿತ ಮಟ್ಟದಲ್ಲಿಲ್ಲ. ಶಾಲೆಗಳಲ್ಲಿ ಕನ್ನಡ ಶಿಕ್ಷಕರ ನೇಮಕಾತಿಯನ್ನು ಹೆಚ್ಚಿಸುವುದರ ಜೊತೆಗೆ ಕನ್ನಡದ ಅರಿವು ಮೂಡಿಸುವುದು ಅಷ್ಟೇ ಅತ್ಯಗತ್ಯವಾಗಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಮಾತನಾಡಿದ ಜಿಲ್ಲಾ ಕನ್ನಡ ಜಾಗೃತಿ ಸಮಿತಿಯ ಸದಸ್ಯ ಸುನೀಲ ಭಾವಿಕಟ್ಟಿ ಅವರು ಗಡಿ ಭಾಗದ ಶಾಲೆಗಳಲ್ಲಿ ಕನ್ನಡ ಶಿಕ್ಷಕರ ಕೊರತೆ ಇರುವುದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಶಿಕ್ಷಕರನ್ನು ನೇಮಿಸಬೇಕು. ಅಗತ್ಯವಿದ್ದಲ್ಲಿ ಒಂದೇ ಶಾಲೆಗೆ ಇಬ್ಬರು ಕನ್ನಡ ಶಿಕ್ಷಕರನ್ನು ನಿಯೋಜಿಸುವ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಇನ್ನೋರ್ವ ಸಮಿತಿ ಸದಸ್ಯರಾದ ಟಿ.ಎನ್. ಮಚ್ಚೆ ಅವರು ಮಾತನಾಡಿ, ವಿವಿಧ ಇಲಾಖೆಗಳ ಜೊತೆಗೆ ಆರೋಗ್ಯ ಇಲಾಖೆಯಲ್ಲಿಯೂ ಕನ್ನಡದ ಬಳಕೆ ಹೆಚ್ಚಾಗಬೇಕಿದೆ. ಆರೋಗ್ಯ ಸಿಬ್ಬಂದಿಗೆ ಕನ್ನಡದ ಅರಿವು ಮೂಡಿಸಿ, ಸಾರ್ವಜನಿಕರೊಂದಿಗೆ ಕನ್ನಡದಲ್ಲಿಯೇ ಸಂವಹನ ನಡೆಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಇನ್ನೋರ್ವ ಸಮಿತಿ ಸದಸ್ಯರಾದ ರಜೀಯಾ ಬಳಕಟ್ಟೆ ಅವರು ಮಾತನಾಡಿ, ಬ್ಯಾಂಕುಗಳಲ್ಲಿನ ಎಲ್ಲಾ ವ್ಯವಹಾರಗಳಲ್ಲಿ ಕನ್ನಡದ ಬಳಕೆಯನ್ನು ಕಡ್ಡಾಯಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮವಹಿಸಬೇಕು ಎಂದು ಆಗ್ರಹಿಸಿದರು.

# ಮಣ್ಣಿನಲ್ಲಿರುವ ಸೂಕ್ಷ್ಮಜೀವಿಗಳನ್ನು ರಕ್ಷಿಸಿ : ಕೃಷಿ ವಿಜ್ಞಾನಿ ಬಸನಾಯಕ ಕರೆ



ಬೀದರ:ಅತಿಯಾದ ರಾಸಾಯನಿಕ ಗೊಬ್ಬರಗಳ ಬಳಕೆಯಿಂದಾಗಿ ಮಣ್ಣಿನ ನೈಸರ್ಗಿಕ ಗುಣಮಟ್ಟ ಹಾಳಾಗುತ್ತಿದೆ. ರೈತರು ನಿಯಮಿತವಾಗಿ ಮಣ್ಣು ಪರೀಕ್ಷೆ ಮಾಡಿಸಬೇಕು. ಹಸಿರು ಗೊಬ್ಬರ, ಕಾಂಪೋಸ್ಟ್ ತರಹದ ಸಾವಯವ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರಿಂದ ಮಣ್ಣಿನಲ್ಲಿರುವ ಸೂಕ್ಷ್ಮಜೀವಿಗಳನ್ನು ರಕ್ಷಿಸಿ, ಭೂಮಿಯ ದೀರ್ಘಕಾಲದ ಉತ್ಪಾದಕತೆಯನ್ನು ಮರಳಿ ಪಡೆಯಬಹುದು ಎಂದು ಬೀದರ ಐಸಿಎಆರ್–ಕೃಷಿ ವಿಜ್ಞಾನ ಕೇಂದ್ರ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು ಡಾ.ರಾಜಶೇಖರ್ ಬಸನಾಯಕ್ ಅವರು ರೈತರಿಗೆ ಕಿವಿಮಾತು ಹೇಳಿದರು.

ಬೀದರ ಜಿಲ್ಲೆಯ ಚಿಕಪೇಟ್, ಮರ್ಕಲ್‌ನಲ್ಲಿ ಇತ್ತೀಚಿನ "ಖೇತಿ ಬಚಾವೋ ಆಂದೋಲನ ಅಭಿಯಾನ"ವನ್ನು ರೈತ ಸಮುದಾಯಕ್ಕೆ ವೈಜ್ಞಾನಿಕ, ಸುಸ್ಥಿರ ಮತ್ತು ಕಡಿಮೆ ವೆಚ್ಚದ ಕೃಷಿ ಪದ್ಧತಿಗಳ ಬಗ್ಗೆ ಜಾಗೃತಿ ಮೂಡಿಸಿ ಅವರು ಮಾತನಾಡಿದರು.

ತೀವ್ರವಾಗಿ ಕಾಡುತ್ತಿರುವ ಮಣ್ಣಿನ ಸವೆತ ಹಾಗೂ ಫಲವತ್ತತೆ ಕುಸಿತದ ಸಮಸ್ಯೆಯ ಬಗ್ಗೆ ಅತಿಯಾದ ರಾಸಾಯನಿಕ ಗೊಬ್ಬರಗಳ ಬಳಕೆಯಿಂದಾಗಿ ಮಣ್ಣಿನ ನೈಸರ್ಗಿಕ ಗುಣಮಟ್ಟ ಹಾಳಾಗುತ್ತಿದೆ. ರೈತರು ನಿಯಮಿತವಾಗಿ ಮಣ್ಣು ಪರೀಕ್ಷೆ ಮಾಡಿಸಬೇಕು. ಹಸಿರು ಗೊಬ್ಬರ, ಕಾಂಪೋಸ್ಟ್ ತರಹದ ಸಾವಯವ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದ–ರಿಂದ ಮಣ್ಣಿನಲ್ಲಿರುವ ಸೂಕ್ಷ್ಮಜೀವಿಗಳನ್ನು ರಕ್ಷಿಸಿ, ಭೂಮಿಯ ದೀರ್ಘಕಾಲದ ಉತ್ಪಾದಕತೆಯನ್ನು ಮರಳಿ ಪಡೆಯಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ಬಳಿಕ ಸಸ್ಯ ಸಂರಕ್ಷಣೆ ಕುರಿತು ಮಾತನಾಡಿದ ವಿಜ್ಞಾನಿ ಡಾ. ಶಿವಕುಮಾರ್ ಅವರು, ಪರಿಸರ ಸ್ನೇಹಿ ಬೆಳೆ ಸಂರಕ್ಷಣಾ ವಿಧಾನಗಳ ಬಗ್ಗೆ ಸುದೀರ್ಘ ಮಾಹಿತಿ ನೀಡಿದರು. ಕೀಟ ಮತ್ತು ರೋಗಗಳ ನಿಯಂತ್ರಣಕ್ಕಾಗಿ ಜೈವಿಕ ಹಾಗೂ ನೈಸರ್ಗಿಕ ಮಾರ್ಗಗಳನ್ನು ಅನುಸ–ರಿಸಲು ಅವರು ಕರೆ ನೀಡಿದರು. ಸ್ಥಳೀಯವಾಗಿ ಸಿಗುವ ಸಸ್ಯ ಸಾಮಗ್ರಿಗಳಿಂದ ಕಷಯ ಹಾಗೂ ಜೈವಿಕ ಕೀಟನಾಶಕಗಳನ್ನು ತಯಾರಿಸುವ ವಿಧಾನವನ್ನು ವಿವರಿಸಿದ ಅವರು, ದುಬಾರಿ ಹಾಗೂ ವಿಷಕಾರಿ ರಾಸಾಯನಿಕಗಳ ಬಳಕೆಯನ್ನು ಕಡಿಮೆ ಮಾಡಿ, ಜೀವವೈವಿಧ್ಯವನ್ನು ರಕ್ಷಿಸುವ ನೈಸರ್ಗಿಕ ಸೂತ್ರಗಳನ್ನು ಅಳವಡಿಸಿಕೊಳ್ಳಲು ಉತ್ತೇಜಿಸಬೇಕು ಎಂದು ತಿಳಿಸಿದರು.

ಬೀದರ ಐಸಿಎಆರ್–ಕೃಷಿ ವಿಜ್ಞಾನ ಕೇಂದ್ರ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು ಡಾ.ರಾಜಶೇಖರ್ ಬಸನಾಯಕ್, ಮೊ.9480696318, 9711330755ಗೆ ಕರೆ ಮಾಡಿ ಮಾಹಿತಿ ಪಡೆಯಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಸ್ಯ ಸಂರಕ್ಷಣಾ ವಿಜ್ಞಾನಿ ಡಾ.ಶಿವಕುಮಾರ್, ರೈತ ಸಂಘದ ಪ್ರಮುಖ ನಾಯಕರಾದ ಶ್ರೀ ಶಂಕರಣ್ಣ ಪಾರಾ ಮತ್ತು ಶ್ರೀ ವೈಜಿನಾಥ್ ಬುಯ್ಯ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಅಪಾರ ಸಂಖ್ಯೆಯ ಪ್ರಗತಿಪರ ರೈತರು ಉತ್ಸಾಹದಿಂದ ಉಪಸ್ಥಿತರಿದ್ದರು.

# ಬಿತ್ತನೆ ಬೀಜ ಕೊರತೆ ಕಂಡುಬಂದರೆ ಹೋರಾಟ: ದಸಂಸ ಎಚ್ಚರಿಕೆ



ಔರಾದ್: ಗಡಿ ತಾಲೂಕುಗಳಾದ ಔರಾದ್ ಹಾಗೂ ಕಮಲನಗರ ಪ್ರದೇಶಗಳಲ್ಲಿ ಬಿತ್ತನೆ ಬೀಜಗಳ ಕೊರತೆ ಉಂಟಾಗದಂತೆ ಕೃಷಿ ಇಲಾಖೆ ಅಧಿಕಾರಿಗಳು ತಕ್ಷಣ ಎಚ್ಚೆತ್ತುಕೊಂಡು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಧನರಾಜ ಮುಸ್ತಾಪುರ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಔರಾದ್ ಮತ್ತು ಕಮಲನಗರ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಬಿತ್ತನೆ ಬೀಜಗಳ ವಿತರಣೆಯಲ್ಲಿ ಗಂಭೀರ ಸಮಸ್ಯೆಗಳು ಎದುರಾಗುತ್ತಿರುವ ಕುರಿತು ನಿರಂತರ ದೂರುಗಳು ಬರುತ್ತಿವೆ ಎಂದು ತಿಳಿಸಿದ್ದಾರೆ.

ಪ್ರಸ್ತುತ ಕೃಷಿ ಚಟುವಟಿಕೆಗಳು ಗರಿಷ್ಠ ಮಟ್ಟದಲ್ಲಿ ನಡೆಯಬೇಕಾದ ಸಮಯವಾಗಿದ್ದು, ಬೀಜಗಳ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕುವ ಪರಿಸ್ಥಿತಿ ನಿರ್ಮಾಣವಾಗಿದೆ. ಅಧಿಕಾರಿಗಳು ನಿರ್ಲಕ್ಷ್ಯ ವಹಿಸದೆ ತಕ್ಷಣ ಕ್ರಮ ಕೈಗೊಂಡು, ಪ್ರತಿ ಗ್ರಾಮಕ್ಕೂ ಅಗತ್ಯ ಪ್ರಮಾಣದಲ್ಲಿ ಬಿತ್ತನೆ ಬೀಜಗಳನ್ನು ಪೂರೈಸುವ ಮೂಲಕ ರೈತರ ಸಮಸ್ಯೆ ಪರಿಹರಿಸಬೇಕು ಎಂದು ಒತ್ತಾಯಿಸಿದ್ದಾರೆ.

ರೈತರಿಗೆ ತೊಂದರೆ ಉಂಟುಮಾಡುವ ರೀತಿಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳನ್ನು ಯಾವುದೇ ಕಾರಣಕ್ಕೂ ದಲಿತ ಸಂಘರ್ಷ ಸಮಿತಿ ಸಹಿಸುವುದಿಲ್ಲ. ಇಂತಹ ಪ್ರಕರಣಗಳು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಸಚಿವರಿಗೆ ಮೇಲಾಧಿಕಾ–ರಿಗಳಿಗೆ ದೂರು ಸಲ್ಲಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಬಿತ್ತನೆ ಬೀಜಗಳ ಸಮರ್ಪಕ ಪೂರೈಕೆಯ ಮೂಲಕ ರೈತರಲ್ಲಿ ವಿಶ್ವಾಸ ಮೂಡಿಸುವುದು ಅತ್ಯಗತ್ಯವಾಗಿದೆ ಎಂದು ಧನರಾಜ ಮುಸ್ತಾಪುರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜ ಕಲ್ಯಾಣ ಇಲಾಖೆಯ ಇಬ್ಬರು ಉಪ ನಿರ್ದೇಶಕರಿಗೆ ದಂಡ



ಕಲ್ಬುರ್ಗಿ:ಸಕಾಲಕ್ಕೆ ಮಾಹಿತಿ ನೀಡದೆ ನಿರ್ಲಕ್ಷ್ಯ ವಹಿಸಿ ಆಯೋಗದ ಆದೇಶ ಪಾಲನೆ ಮಾಡದ ಸಮಾಜ ಕಲ್ಯಾಣ ಇಲಾಖೆಯ ಇಬ್ಬರು ಉಪ ನಿರ್ದೇಶಕರಿಗೆ ಮಾಹಿತಿ ಆಯೋಗ ಕಲ್ಬರ್ಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಶ್ರೀ ಬಿ.ವೆಂಕಟಸಿಂಗ್ ದಂಡ ವಿಧಿಸಿದ್ದಾರೆ.

ರಾಯಚೂರಿನ ರಂಗಲಿಂಗನ ಗೌಡ ಎನ್ನುವವರು ಮಾಹಿತಿ ಹಕ್ಕು ಅಧಿನಿಯಮದಡಿ ಕೇಳಿದ ಮಾಹಿತಿಯನ್ನು ಎರಡು ವರ್ಷವಾದರು ನೀಡದ ಕಾರಣ ಅವರು ಆಯೋಗಕ್ಕೆ ಸಲ್ಲಿಸಿದ ಮೇಲ್ಮನವಿ ವಿಚಾರಣೆ ನಡೆಸಿದ ಆಯೋಗ ರಾಯಚೂರಿನಲ್ಲಿ ಈ ಹಿಂದೇ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಶ್ರೀಮತಿ ವಿಜಯ ಲಕ್ಷ್ಮೀ ಅವರಿಗೆ 10 ಸಾವಿರ ಹಾಗೂ ರಾಯಚೂರಿನ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಶ್ರೀ ಶಿವಪ್ಪ ಅವರಿಗೆ 5 ಸಾವಿರ ರೂಪಾಯಿಗಳ ದಂಡ ವಿಧಿಸಿದೆ.

ಮೇಲ್ಮನವಿದಾರರು ಕೋರಿದ ಮಾಹಿತಿ ನೀಡುವಂತೆ ಆಯೋಗ ಮಾಡಿದ ಆದೇಶ ಪಾಲನೆ ಮಾಡದೆ ಹಾಗೂ ವಿಚಾರಣೆಗೂ ಹಾಜರಾಗದ ಕಾರಣ ಹಾಲಿ ಶಹಾಪುರ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಶ್ರೀಮತಿ ವಿಜಯಲಕ್ಷ್ಮೀ ಅವರಿಗೆ ಈ ಹಿಂದೇ 5 ಸಾವಿರ ದಂಡ ವಿಧಿಸಿ ಸದ್ರಿ ದಂಡ ಪಾವತಿ ಮಾಡಿ ಮುಂದಿನ ವಿಚಾರಣೆಗೆ ಹಾಜರಾಗಿ ಮಾಹಿತಿ ನೀಡುವಂತೆ ಆಯೋಗ ಮಾಡಿದ ಆದ–ೀಶ ಪಾಲನೆ ಮಾಡದೆ ನಿರ್ಲಕ್ಷ್ಯ ತೋರಿದ ಕಾರಣ ದಂಡದ ಪ್ರಮಾಣವನ್ನು 10 ಸಾವಿರಕ್ಕೆ ಹೆಚ್ಚಿಸಿ ಆಯೋಗ ಆದೇಶ ಮಾಡಿದೆ.

ಅದೇ ರೀತಿ ರಾಯಚೂ–ರಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಶಿವಪ್ಪ ಅವರಿಗೆ ಮೇಲ್ಮನವಿದಾರರು ಕೋರಿದ ಮಾಹಿತಿ ನೀಡಿ, ಮುಂದಿನ ವಿಚಾರಣೆಗೆ ಹಾಜರಾಗುವಂತೆ ಈ ಹಿಂದೆ ಆಯೋಗ ಆದೇಶ ಮಾಡಿತ್ತು. ಆದರೆ ಆಯೋಗದ ಆದೇಶ ಪಾಲನೆ ಮಾಡದೆ ನಿರ್ಲಕ್ಷ್ಯ ತೋರಿದ ಕಾರಣ ಅವರಿಗೂ ಸಹ 5 ಸಾವಿರ ರೂಪಾಯಿಗಳ ದಂಡ ವಿಧಿಸಲಾಗಿದೆ.

ಉಭಯ ಅಧಿಕಾರಿಗಳಿಗೆ ವಿಧಿಸಿದ ದಂಡ ವಸೂಲಿಗೆ ಕ್ರಮ ವಹಿಸಿ ಮುಂದಿನ ವಿಚಾರಣೆ ವೇಳೆ ವರದಿ ನೀಡುವಂತೆ ರಾಯಚೂರು ಮತ್ತು ಯಾದಗಿರ ಜಿಲ್ಲೆಯ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ, ಶ್ರೀ ಪ್ರವೀಣ–ಕುಮಾರ ಹಾಗೂ ಶ್ರೀ ಚಿದಾನಂದಪ್ಪ ಅವರಿಗೆ ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ 18(3) ರಡಿಯಲ್ಲಿ ನಿರ್ದೇಶಿಸಿದೆ. ತಪ್ಪಿದಲ್ಲಿ ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ 20(2) ರಡಿ ಕ್ರಮ ವಹಿಸಲಾಗುವುದೆಂದು ಆದೇಶ ಮಾಡಿದೆ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.

# ಕುಂಬಾರವಾಡದಲ್ಲಿ ಅಂಬೇಡ್ಕರ್ ಸಮುದಾಯ ಭವನಕ್ಕೆ ಜಾಗ ಮಂಜೂರು ಮಾಡುವಂತೆ ಧರಣಿ ಸತ್ಯಾಗ್ರಹ




ಬೀದರ್: ನಗರದ ಕುಂಬಾರವಾಡ ಪ್ರದೇಶದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣ–ಕ್ಕೆ ಜಾಗ ಮಂಜೂರು ಮಾಡುವಂತೆ ಆಗ್ರಹಿಸಿ ಸ್ಥಳೀಯ ನಿವಾಸಿಗಳು ಶುಕ್ರವಾರ ಧರಣಿ ಸತ್ಯಾಗ್ರಹ ನಡೆಸಿದರು.

ಕುಂಬಾರವಾಡ ಮುಖ್ಯರಸ್ತೆಯಲ್ಲಿರುವ ಸಂತೋಷ್ ಅವರ ಮನೆ ಸಮೀಪದ ಸರ್ವೇ ನಂ. 51/1ರಲ್ಲಿರುವ 75 ಮತ್ತು 80 ಅಡಿ ವಿಸ್ತೀರ್ಣದ ಖಾಲಿ ಜಾಗವನ್ನು ಅಂಬೇಡ್ಕರ್ ಸಮುದಾಯ ಭವನಕ್ಕಾಗಿ ಮೀಸಲಿಡಬೇಕೆಂದು ರಮಾತಾಯಿ ಮಹಿಳಾ ಸಂಘ ಹಾಗೂ ಕುಂಬಾರವಾಡದ ನಿವಾಸಿಗಳು ಹಲವು ವರ್ಷಗಳಿಂದ ಬೇಡಿಕೆ ಸಲ್ಲಿಸುತ್ತಿದ್ದಾರೆ.

ಕಳೆದ 25 ವರ್ಷಗಳಿಂದ ಇದೇ ಸ್ಥಳದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ, ಬುದ್ಧ ಪೂರ್ಣಿಮೆ, ಅಶೋಕ ದಶಮಿ ಸೇರಿದಂತೆ ವಿವಿಧ ಸಾಮಾಜಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರಲಾಗುತ್ತಿದೆ. ಕುಂಬಾರವಾಡದಲ್ಲಿ ವಿವಿಧ ಧರ್ಮ ಹಾಗೂ ಸಮುದಾಯಗಳಿಗೆ ಸಂಬಂಧಿಸಿದ ರಾಮ ಮಂದಿರ, ಮಸೀದಿ, ಚರ್ಚ್‌ಗಳು ನಿರ್ಮಾಣಾ ಮಾಡಿಕೊಂಡಿದ್ದಾರೆ ಆದರೆ ಅಂಬೇಡ್ಕರ್ ಸಮುದಾಯ ಭವನ ಇಲ್ಲದಿರುವುದು ಬೇಸರದ ಸಂಗತಿಯಾಗಿದೆ.

ಜೂನ್ 9ರಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗಿದ್ದು, ಜಾಗ ಮಂಜೂರು ಮಾಡುವ ಭರವಸೆ ನೀಡಲಾಗಿದೆ ಎಂದು ಧರಣಿನಿರತರು ಹೇಳಿದರು. ತಕ್ಷಣವೇ ಜಾಗ ಮಂಜೂರು ಮಾಡಿ ಸಮಾಜ ಕಲ್ಯಾಣ ಇಲಾಖೆಯಿಂದ 50 ಲಕ್ಷ ಅನುದಾನ ಬಿಡುಗಡೆ ಮಾಡಿ ಸಮುದಾಯ ಭವನ ನಿರ್ಮಾಣಕ್ಕೆ ಅಡಿಗಲ್ಲು ಕಾರ್ಯಕ್ರಮ ನೆರವೇರಿಸಬೇಕು ಎಂದು ಆಗ್ರಹಿಸಿದರು.ಜನಪ್ರತಿನಿಧಿಗಳು ಚುನಾವಣೆ ಸಂದರ್ಭಕ್ಕೆ ಮಾತ್ರ ಸೀಮಿತವಾಗದೆ ಜನರ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ಕಲ್ಪಿಸಬೇಕು ಎಂದು ಜಿಲ್ಲಾಡಳಿತ, ಮಹಾನಗರ ಪಾಲಿಕೆ ಆಯುಕ್ತರು ಹಾಗೂ ಶಾಸಕ ರಹೀಂ ಖಾನ್ ಅವರಿಗೆ ಮನವಿ ಮಾಡಿದರು.

ಧರಣಿಯಲ್ಲಿ ನಿಲ್ಲಮ್ಮ, ಪ್ರಭಾವತಿ, ನರಸಮ್ಮ, ಲಕ್ಷ್ಮೀಬಾಯಿ, ಸುಲೋಚನಾ, ಗುಜ್ಜಮ್ಮ, ಸುಹಾಸಿನಿ, ಅಂಬಿಕಾ, ಗಂಗಮ್ಮ, ರಮಾಬಾಯಿ, ಜ್ಯೋತಿ, ಚಿನ್ನಮ್ಮ, ಸರಸ್ವತಿ, ಶೋಭಾ, ದ್ರೌಪದಿ, ಸುಮಿತ್ರಾ, ಶ್ರೀದೇವಿ, ಅಕ್ಕಮ್ಮ, ಕಾಶಿಬಾಯಿ, ತುಳಜಮ್ಮ, ಶರಣಮ್ಮ, ಕಲಾವತಿ, ಶಿವಲಿಂಗಪ್ಪ, ಸಿದ್ದಪ್ಪ, ತುಕಾರಾಮ, ಶ್ರೀಧರ, ಅನಿಲ್, ಸತೀಶ್, ಭಾರತ ಕಾಂಬಳೆ, ಸಂತೋಷ್, ಶ್ರೀಧರ ಕಳೆಕಾರ್, ಸಾಯಿನಾಥ, ದಿಗಂಬರ, ದೀಪಕ್, ದಿಲೀಪ್, ಕಾಶಿನಾಥ್, ಸದಾನಂದ್, ಸಂಜುಕುಮಾರ್, ಅಡೆಪ್ಪ, ಸಿದ್ಧಾರ್ಥ ವಿಜಯ, ಲೋಕೇಶ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಭಜನೆ ಕಾರ್ಯಕ್ರಮ ನೀಡಿದ ಸಂಘದ ಪದಧಾರಿಗಳಿಗೆ ಸನ್ಮಾನ



ಬೀದರಃ ವಿಶ್ವ ಪರಿಸರ ದಿನಾಚರಣೆ, ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ರಾಜ್ಯ ಮಟ್ಟದ ಸಾಹಿತ್ಯಗೋಷ್ಠಿ ಸಾಂಸ್ಕೃತಿಕ ಕಲಾಸಿರಿ, ಸಂಗೀತ ಕನ್ನಡ ಹಾಡುಗಳ ಗಾಯಾನ ಭಜನೆ ಕಾರ್ಯಕ್ರಮ ನೀಡಿದ ಮಾತೋಶ್ರೀ ರಮಾಬಾಯಿ ಸಾಂಸ್ಕೃತಿಕ ಸಂಘ ಮೈಲೂರು, ಭಾರತಿ ಸಾವಿತ್ರಬಾಯಿ ಮಹಾದೇವಿ, ಲಕ್ಷ್ಮೀ ಬಕ್ಕಮ್ಮಾ ಶರಣಮ್ಮಾ, ಈಶ್ವರಿ ಸಿಂಧೆ, ರೇಖಾ, ಶಶಿಕಲಾ ಸಂಗಮ್ಮಾ ಲಲಿತಾಬಾಯಿ ಶಾಂತಮ್ಮಾ, ಜೈ ಭವಾನಿ ಸಾಂಸ್ಕೃತಿಕ ಭಜನಾ ಸಂಘ ರಕ್ಷಾಳ ಬಿ, ಮಾಣಿಕ ನರಸಪ್ಪಾ. ಭಾಗಮ್ಮಾ ನಾಗಣ್ಣಾ, ಲಲಿತಾ, ಶಾರದಾ, ಪಾರ್ವತಿ, ನಿಲ್ಲಮ್ಮಾ ನಾಗಮ್ಮಾ, ಝರೇಮ್ಮಾ, ಅಂಬಿಕಾ,ಈಜಮ್ಮಾ ಸುಬ್ಬಮ್ಮಾ ಮಲ್ಲಮ್ಮಾ, ಶಾರಮ್ಮಾ ಕವಿತಾ, ರಮಾತಾಯಿ ಮಹಿಳಾ ಸಂಘದ ಸುಲೋಚನಾ ಕಲಾವತಿ ನಿಲ್ಲಮ್ಮಾ ಲಕ್ಷ್ಮಿ ??ೀ ರಮಾಬಾಯಿ ರಂಗಮ್ಮಾ ತ್ರೀವೇಣಿ ಚಿನ್ನಮ್ಮಾ ಗುಜ್ಜಮ್ಮಾ ಸುಮಿತ್ರಾಬಾಯಿ ಜಗದೇವಿ ಪಂಚಶೀಲಾ ಪದ್ಮಾವತಿ ಸುನೀತಾ ಸುಹಾಸಿನಿ ಅಂಬಿಕಾ ಗಂಗಮ್ಮಾ ಶ್ರೀದೇವಿ ಜ್ಯೋತಿ ಸುವರ್ಣ ಇಂದಮ್ಮಾ ಕಾಶಿಬಾಯಿ ಸರಸ್ವತಿ ನರಸಮ್ಮಾ ಮಂಜುಳಾ ಕವಿತಾ ತುಳಜಾಬಾಯಿ ಸುರೇಖಾ ರವ–ರಿಗೆ ಸನ್ಮಾನವನ್ನು ಮಾಡಲಾಯಿತು, 2025–26 ನೇ ಸಾಲಿನ ಸಂಘ ಸಂಸ್ಥೆಗಳ ಧನಸಹಾಯ ಸಾಮಾನ್ಯ ಯೋಜನೆಯಡಿಯಲ್ಲಿ ವಿಶ್ವ ಕನ್ನಡಿಗರ ಸಂಸ್ಥೆ ನೌಬಾದ ಬೀದರ ಹಾಗೂ ಕರ್ನಾಟಕ ಸರ್ಕಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಂ–ಯುಕ್ತಾಶ್ರಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಎಸ್ ಎಸ್ ಎಲ್ ಸಿ ರಾಜ್ಯಕ್ಕೆ 2 ರ್‍ಯಾಂಕ ಪಡೆದ ಬೀದರ ವಿದ್ಯಾರ್ಥಿ ಆನಂದ ಉದ್ಘಾಟನೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಜಂಟಿ ನಿರ್ದೇಶಕ ಬಳವಂತರಾವ ಪಾಟೀಲ್ ಪರಿಸರವಾದಿ ಡಾ. ಕಾಶಿನಾಥ ಪಾಟೀಲ್ ನಿವೃತ್ತ ವಾರ್ತಾಧಿಕಾರಿ ಜಿ ಚಂದ್ರಕಾಂತ, ನಾಡಿನ ಖ್ಯಾತ ಜಾನಪದ ಗಾಯಕ ಶಂಭುಲಿಂಗ ವಾಲದೊಡ್ಡಿ ಕರ್ನಾಟಕ ಜಾನಪದ ಆಕಾಡೆಮಿ ಸದಸ್ಯ ವಿಜಕುಮಾರ ಸೋನಾರೆ, ಪ್ರೊ. ಶಿವಶರಣಪ್ಪಾ ಹುಗ್ಗೆ ಪಾಟೀಲ್, ಡಾ. ರಾಮಚಂದ್ರ ಗಾಣಪೂರ, ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಕಾರ್ಯಕ್ರಮವನ್ನು ಅಂತರಾಷ್ಟ್ರೀಯ ಕನ್ನಡ ಸೇವಕ ಡಾ. ದೊಡ್ಡಪ್ಪಾ ಪೂಜಾರಿ ಹುಂಡೇಕಲ್ ಅಧ್ಯಕ್ಷತೆ ವಹಿಸಿದ ಕಾರ್ಯಕ್ರಮ ಸಂಸ್ಥೆ ಅಧ್ಯಕ್ಷ ಡಾ. ಸುಬ್ಬಣ್ಣ ಕರಕನಳ್ಳಿ ವಿವಿಧ ಸಂಘ ಸಂಸ್ಥೆ ಭಜನ ಸಂಘದವರಿಗೆ ಸನ್ಮಾನ ಮಾಡಿದರು.

# ಆರ್.ಜೆ ಕಾಲೇಜಿನಲ್ಲಿ ಕಾನೂನು ಅರಿವು ಕಾರ್ಯಕ್ರಮ



ಕಲಬುರಗಿ :ನಗರದ ಸರದಾರ ವಲ್ಲಭಭಾಯಿ ಪಟೇಲ್ ಎಜ್ಯುಕೇಷನ್ ಟ್ರಸ್ಟ್ ಸಂಚಾಲಿತ ರಮಾಬಾಯಿ ಜಹಾಗೀರದಾರ್ (ಆರ್.ಜೆ) ಸ್ವತಂತ್ರಪದವಿ ಪೂರ್ವ ವಿಜ್ಞಾನ ಕಾಲೇಜು ರಾಷ್ಟ್ರೀಯ ಸೇವಾ ಯೋಜನೆ (NSS) ಘಟಕದ ಸಂಯುಕ್ತಾಶ್ರಯದಲ್ಲಿ "ಸೈಬರ್ ಮತ್ತು ಪೋಕ್ಸೊ"ದಲ್ಲಿನ ಇತ್ತೀಚಿನ ಪ್ರವೃತಿಗಳ ಕುರಿತು ವಿಚಾರ ಸಂಕೀರ್ಣ ಮತ್ತು 2026–27ನೇ ಸಾಲಿನ ಎನ್.ಎಸ್.ಎಸ್. ಕಾರ್ಯಕ್ರಮದ ಉದ್ಘಾಟನೆಯನ್ನು ಶ್ರೀ ರಾಘವೇಂದ್ರ ಬಜಂತ್ರಿ ಸಿ.ಪಿ.ಐ (ಸೈಬರ್ ಕ್ರೈಮ್ ಪೋಲಿಸ್ ಸ್ಟೇಷನ್ ಕಲಬುರಗಿ) ಹಾಗೂ ಡಾ. ಚಂದ್ರಶೇಖರ ದೊಡ್ಡಮನಿ (ಓಖಖ ವಿಭಾಗಿಯ ಅಧಿಕಾರಿಗಳು ಕಲಬುರಗಿ) ಇವರು ನೆರವೇರಿಸಿದರು.

"ಸೈಬರ್ ಮತ್ತು ಪೊಕ್ಸೊ" ಇತ್ತೀಚಿನ ಪ್ರವೃತಿಗಳ ಕು–ರಿತು ಶ್ರೀ ರಾಘವೇಂದ್ರ ಬಜಂತ್ರಿಯವರು ವಿವರಣಾತ್ಮಕ ವಿಚಾರ ಸಂಕೀರ್ಣವನ್ನು ನಡೆಸಿಕೊಟ್ಟರು. ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ತಡೆಯುವ ಕಾಯ್ದೆ ಬಂದಮೇಲೆ ಚಿಕ್ಕ ಮಕ್ಕಳು ನಿರ್ಭಯವಾಗಿ ಒಡಾಡಲು ಸಾಧ್ಯವಾಯಿತು. ಆರ್.ಟಿ.ಐ. ಕಾಯ್ದೆ ಬಗ್ಗೆ ವಿವರಣೆ ನೀಡಿದರು.

ಸೋಷಿಯಲ್ ಮೀಡಿಯಾ ಬಂದ್ ಮಾಡಿ

ತಪ್ಪು ಮಾಡಿಲ್ಲ ಎಂದು ಭ್ರಮೆಯಲ್ಲಿ ಮುಳುಗಬಾರದು

ಡಿಜಿಟಲ್ ಅರೆಷ್ಟ್ ಇದೊಂದು ಸುಳ್ಳಿನ ಕಂತೆ

ಉದ್ಯೋಗ ನೀಡುವವನು ಯಾವುದೇ ದುಡ್ಡು ಕೇಳುವುದಿಲ್ಲ ಧೂಮಪಾನ, ಗಾಂಜಾ, ಸರಾಯಿ, ಗುಟುಕಾ ಸೇವನೆ, ಮುಂತಾದ ಅಪರಾದ ತಡೆಗಟ್ಟಲು ದಿನದ 24 ಗಂಟೆ "ನಿಮ್ಮ ಸೇವೆಯಲ್ಲಿ" ಪೋಲಿಸ್ ಇಲಾಖೆ ಕೆಲಸ ಮಾಡುತ್ತದೆ. ನಾನು ಇಲ್ಲಿ ಬಂದು ನಿಂತು ಮಾತನಾಡಿದಂತೆ ನೀವು ಕೂಡ ಆಗಬೇಕೆಂದು ವಿದ್ಯಾರ್ಥಿಗಳ ಮನಸ್ಸಿಗೆ ಉತ್ಸಾಹ ತುಂಬಿದರು. ಜೀವನ ಬಹಳ ಸುಂದರವಾಗಿದೆ ಹಾಳು ಮಾಡಿಕೊಳ್ಳಬಾರದೆಂದು ಹೇಳಿದರು.

ಸಭೆಯ ಅಧ್ಯಕ್ಷ ಸ್ಥಾನ ವಹಿಸಿದ ಪ್ರಾಚಾರ್ಯರಾದ ಡಾ॥ ಭುರ್ಲಿ ಪ್ರಹ್ಲಾದ ಅವರು ಇಚ್ಛಾಶಕ್ತಿ ಇದ್ದರೆ ಏನಾದರು ಸಾದಿಸಬಹುದು, ಸುಂದರ ಹೂಗಳು ಬಾಡಬಾರದು, ಶಿಕ್ಷಕರು ಪಾಲಕರು ಮಕ್ಕಳಿಗೆ ಬೈದರೆ ಮನಸ್ಸಿಗೆ ಹಚ್ಚಿಕೊಳ್ಳದೇ ಆಶೀರ್ವಾದವೆಂದು ತಿಳಿದುಕೊಂಡರೆ ಬದುಕು ಸುಂದರವಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ತಿಳಿಹೇಳಿದರು.

ಕಾರ್ಯಕ್ರಮದ ಮುಖ್ಯ ಅಥಿತಿಗಳಾಗಿರುವ ಡಾ. ಚಂದ್ರಶೇಖರ ದೊಡ್ಡಮನಿ ಅವರು ಓಖಖನ ಉದ್ದೇಶ, ಧ್ಯೇಯ ಮತ್ತು ವಿದ್ಯಾರ್ಥಿಗಳಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಲು ಪ್ರೇರೇಪಿಸಿದರು. ಸ್ವಚ್ಛತೆ, ಗ್ರಾಮೋದ್ಧಾರ, ಸಮಾಜಮುಖಿ ಕಾರ್ಯಗಳನ್ನು ಕೈಗೊಳ್ಳಬೇಕೆಂದು ಸ್ವಯಂಸೇವಕರಿಗೆ ಕರೆನೀಡಿದರು.

ಕಾರ್ಯಕ್ರಮಾಧಿಕಾರಿಗಳಾದ ಶ್ರೀ ಪ್ರಕಾಶ ಚವ್ಹಾಣ ಅವರು ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಶ್ರೀ ಮಳೇಂದ್ರ ಹಿರೇಮಠ ಅವರು ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಕಾಲೇಜಿನ ವಿದ್ಯಾರ್ಥಿಗಳು, ಶಿಬಿರಾರ್ಥಿಗಳು ಉಪ ಪ್ರಾಚಾರ್ಯರು, ಉಪನ್ಯಾಸಕ ಹಾಗೂ ಸಿಬ್ಬಂಧಿ ಬಳಗ ಉಪಸ್ಥಿತರಿದ್ದರು.

# ಸ್ವಾಸ್ತಿಕ ನಗರದ ಮಹಾಲಕ್ಷ್ಮಿ ಗುಡಿಯಲ್ಲಿಅಧಿಕ ಮಾಸದ ನಿಮಿತ್ಯ 33 ವಚನ ಪುಸ್ತಕ ವಿತರಣೆ



ಕಲಬುರಗಿ:ಅಧಿಕ ಮಾಸದ ಈ ದಿನದಂದು ಶುಕ್ರವಾರ ಸ್ವಾಸ್ತಿಕ ನಗರದ ಶ್ರೀ ಮಹಾಲಕ್ಷ್ಮೀಗುಡಿಯಲ್ಲಿ ಭಕ್ತರಿಗೆ ಶರಣ ಶರಣೆಯರ 108 ವಚನಗಳನ್ನು ಮುದ್ರಣ ಮಾಡಿದ ಶರಣಗೌಡಕಿರಣಗಿ ವಚನಾಮೃತ ಪುಸ್ತಕ ವಿತರಿಸಿ 33 ಗುಡಿಗೆ ಪ್ರದರ್ಶನ ಹಾಕಿ 33 ಭಜನೆ ಹಾಡುಗಳನ್ನು ಹಾಡುವ ಮೂಲಕ ವಿಶೇಷ ರೀತಿಯಲ್ಲಿಅಧಿಕ ಶುಕ್ರವಾರಆಚರಿಸಲಾಯಿತು–ಎಂದುಧಾರ್ಮಿಕ ಸೇವಾ ಸಂಸ್ಥೆಯಅಂಡಗಿ ಪ್ರತಿಷ್ಠಾನದ ಕಾರ್ಯದರ್ಶಿ ರೇಖಾಅಂಡಗಿ ಮಾತನಾಡಿದರು. ಸ್ವಾಸ್ತಿಕ ನಗರದಮಹಾಲಕ್ಷ್ಮೀ ಭಜನಾ ಮಂಡಳಿ ಅಧ್ಯಕ್ಷರಾದ ಕಮಲಾ ಬಿ. ಪಾಟೀಲ ಹೇರೂರ ಉಪಾಧ್ಯಕ್ಷರಾದ ರಾಜೇಶ್ವರಿಡೆಂಗಿ ಹಾಗೂ ಪದಾಧಿಕಾರಿಗಳಾದ ಇಂದುಮತಿಗುಗ್ಗವಾಡ, ಗುರುಸಿದ್ಧಮ್ಮ ಪಾಟೀಲ, ಶಾಂತಾಬಾಯಿ ಹಾಲಮಟ, ನೀಲಾಂಬಿಕ ಮಂಗಶೆಟ್ಟಿ, ಜಗದೇವಿ ಅವಂಟಿ, ಸೀಮಾ ರೆಡ್ಡಿ, ಜರಿತಾದುಧನಿ, ಶಕುಂತಲಾ ಸುರಗುಂಡೆ, ಮಹೇಶ್ವರಿಕೋಕಟ್, ಕಮಲಾಬಾಯಿ ಜವಳಿ, ರೇಣುಕಾ ಪಾಟೀಲ, ಗಾಯಿತ್ರಿಚಿಟ್ಟಾ, ರೇಣುಕಾ ಪಾಟೀಲ, ವಿಜಯಲಕ್ಷ್ಮೀಕೊತಂಬರಿ, ಪ್ರಮೀಣಾ ಹಲಚೇರಿ, ಪದ್ಮಾಯಾದವ, ಮಹಾದೇವಿ ದುಖಾನದಾರ, ಶಾಂತಾಬಾಯಿಎಲ್ದೇರಿ, ಜಯಶ್ರೀ ಕೋಗನೂರ, ಸುನಂದಾ ಸ್ವಾಮಿ, ಜಗದೇವಿ ಚಿಟ್ಟಾ, ಶೈಲಜಾಗುರುಮಿಠಕಲ್, ಗಂಗಮ್ಮರಾಯಕೋಡಿ, ಶೋಭಾ ಬಿರಾದಾರ, ಉಪಸ್ಥಿತರಿದ್ದರು.

ದೇವಿಗುಡಿ ಸ್ಥಾಪನೆಯಾದ ವರ್ಷದಿಂದ ಸುಮಾರು 15 ವರ್ಷಗಳಿಂದ ಪೂಜೆ ಸಲ್ಲಿಸುತ್ತಿರುವಶ್ರೀಮತಿ ಮೀನಾಕ್ಷಿ ಪಂಡಿತ್ ಸುಮಾರು 10 ವರ್ಷಗಳಿಂದ ಮಗ ಬಾಹುಬಲಿ ಪಂಡಿತ್ ಈಗ ಎಂಟು ವರ್ಷಗಳಿಂದ ಸೊಸಿ ಸ್ಮೀತಾ ಪಂಡಿಹೀಗೆ 33 ವರ್ಷಗಳಿಂದ ಗುಡಿ ಪೂಜಾರಿ ಸೇವೆ ಸಲ್ಲಿಸುತ್ತಿರುವಕುಟುಂಬಕ್ಕೆ ವಿಶೇಷ ಅಭಿನಂದನೆಯನ್ನು ಶಿವರಾಜ ಅಂಡಗಿ ತಿಳಿಸಿದ್ದಾರೆ.

# ಸರ್ವರ್ ಸಮಸ್ಯೆ ಬಗೆಹರಿಸಲು ಅಪ್ಪುರಾಜ ಆಗ್ರಹ



■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಸರ್ವರ್ ಸಮಸ್ಯೆ ಬಗೆಹರಿಸಿ ಜನರಿಗೆ ಸರಳವಾಗಿ ಜಾತಿ ಹಾಗೂ ಆದಾಯ ಪ್ರಮಾಣ ಪತ್ರ ನೀಡಬೇಕು ಎಂದು ಭೀಮ್ ರಾಜ್ಯ ದಲಿತ ಸೇವಾ ಸಮೀತಿ (ರಿ ) ರಾಜ್ಯಾಧ್ಯಕ್ಷ ಅಪ್ಪುರಾಜ ನಿಮಾದಾರ ಆಗ್ರಹಿಸಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆಯಲು ಸಾರ್ವಜನಿಕರು ಮುಂಜಾನೆ 8 ಗಂಟೆಯಿಂದಲೇ ತಹಸೀಲ್ದಾರ್ ಕಚೇರಿ ಮುಂದೆ ಸಾಲುಗಟ್ಟಿ ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದರೆ ಸರ್ವರ್ ಸಮಸ್ಯೆಯಿಂದ ಜನರು ದಿನವಿಡೀ ಕಾಯುವಂತಾಗಿದ್ದು, ವಿದ್ಯಾರ್ಥಿಗಳು, ರೈತರು ಹಾಗೂ ಸಾಮಾನ್ಯ ನಾಗರಿಕರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ.

ಪ್ರಸ್ತುತ ಸರ್ಕಾರ ಪಡಿತರ ಚೀಟಿಗೆ ಜಾತಿ ಪ್ರಮಾಣ ಪತ್ರ ಲಿಂಕ್ ಮಾಡುವಂತೆ ಆದೇಶ ಹೊರಡಿಸಿರುವುದರಿಂದ ಹಾಗೂ ಶಾಲೆಗಳು ಪ್ರಾರಂಭವಾಗಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ ಅಗತ್ಯ ಹೆಚ್ಚಾಗಿದೆ. ಆದರೆ ಸರ್ವರ್ ಸಮಸ್ಯೆಯಿಂದ ಜನರು ಸಮಯ ಮತ್ತು ಹಣ ವ್ಯರ್ಥ ಮಾಡಿಕೊಳ್ಳುವಂತಾಗಿದೆ.

ರಾಜ್ಯ ಸರ್ಕಾರ ಕೂಡಲೇ ಸರ್ವರ್ ಸಮಸ್ಯೆಯನ್ನು ಶಾಶ್ವತವಾಗಿ ಬಗೆಹರಿಸಿ, ಸಾರ್ವಜನಿಕರಿಗೆ ಸರಳ ಮತ್ತು ಸುಗಮವಾಗಿ ಜಾತಿ ಹಾಗೂ ಆದಾಯ ಪ್ರಮಾಣ ಪತ್ರಗಳನ್ನು ನೀಡುವ ವ್ಯವಸ್ಥೆ ಕಲ್ಪಿಸಬೇಕು ಎಂದು ಭೀಮ ರಾಜ್ಯ ದಲಿತ್ ಸೇವಾ ಸಮೀತಿ (ರಿ) ರಾಜ್ಯಾಧ್ಯಕ್ಷರಾದ ಶ್ರೀ ಅಪ್ಪುರಾಜ ನಿಮಾದಾರ ಆಗ್ರಹಿಸಿದ್ದಾರೆ.

ಒಂದು ವೇಳೆ ಸಮಸ್ಯೆಯನ್ನು ಶೀಘ್ರದಲ್ಲಿ ಪರಿಹರಿಸದಿದ್ದಲ್ಲಿ, ಭೀಮ ರಾಜ್ಯ ದಲಿತ್ ಸೇವಾ ಸಮೀತಿ (ರಿ) ವತಿಯಿಂದ ರಾಜ್ಯಾದ್ಯಂತ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

# ವಿಜಯಪುರದಿಂದ ಬೇನಾಳ ರೈಲು ನಿಲ್ದಾಣಕ್ಕೆ ನೂತನ ಬಸ್ ಸೇವೆ ಆರಂಭ

■ ಉದಯರಶ್ಮಿ ದಿನಪತ್ರಿಕೆ



ಆಲಮಟ್ಟಿ: ಗ್ರಾಮಸ್ಥರ ಬಹು ದಿನಗಳ ಬೇಡಿಕೆಯಾಗಿದ್ದ ವಿಜಯಪುರದಿಂದ ಬೇನಾಳ ರೈಲು ನಿಲ್ದಾಣಕ್ಕೆ ನೂತನ ಬಸ್ (ಸಂಚಾರ ) ಸೇವೆ ಇಂದು ಆರಂಭವಾಗಿದೆ.

ವರುಷದ ಹಿಂದೆ ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ಬೇನಾಳ ಆರ್. ಎಸ್. ಗ್ರಾಮಸ್ಥರು ಮನವಿ ಮಾಡಿಕೊಂಡಿದ್ದರು, ಮನವಿಗೆ ಸ್ಪಂದಿಸಿದ ಅಧಿಕಾರಿಗಳು ಬಸ್ ಸಂಚಾರವನ್ನು ಆರಂಭಿಸಿದ್ದಾರೆ.

ಈ ನೂತನ ಬಸ್ಸು ಪ್ರತಿದಿನ ವಿಜಯಪುರ ಕೇಂದ್ರ ಬಸ್ ನಿಲ್ದಾಣದಿಂದ ಬೆಳಿಗ್ಗೆ 7:45ಕ್ಕೆ ಹೊರಟು 09: 30ಕ್ಕೆ ಆಲಮಟ್ಟಿ ಉದ್ಯಾನಕ್ಕೆ ತಲುಪುತ್ತದೆ.

09:45 ನಿಮಿಷಕ್ಕೆ ಉದ್ಯಾನದಿಂದ ಹೊರಟು 11: 30 ನಿಮಿಷಕ್ಕೆ ವಿಜಯಪುರವನ್ನು ತಲುಪುತ್ತದೆ.

ಅದೇ ಬಸ್ಸು 11 : 45 ನಿಮಿಷಕ್ಕೆ ವಿಜಯಪುರವನ್ನು ಬಿಟ್ಟು 01: 30ಕ್ಕೆ ಆಲಮಟ್ಟಿ ಉದ್ಯಾನಕ್ಕೆ ಬರುತ್ತದೆ.

ನಂತರ ಮಧ್ಯಾಹ್ನ 2 ಗಂಟೆಗೆ ಉದ್ಯಾನವನ್ನು ಬಿಟ್ಟು 3:30ಕ್ಕೆ ವಿಜಯಪುರವನ್ನು ತಲುಪುತ್ತದೆ.

ಹೀಗೆ ಪ್ರತಿದಿನ 4 ಸಲ ಬಸ್ಸು ಸೇವೆಯನ್ನು ಒದಗಿಸುತ್ತದೆ.

ನೂತನ ಬಸ್ ಸಂಚಾರದಿಂದ ಈ ಭಾಗದ ವಿದ್ಯಾರ್ಥಿಗಳಿಗೆ, ರೈತರಿಗೆ, ಕೂಲಿಕಾರ್ಮಿಕರಿಗೆ, ಮಹಿಳಾ ಉದ್ಯೋಗಿಗಳಿಗೆ ಬಹಳ ಸಹಾಯವಾಗಿದೆ.

ವಿಜಯಪುರ ಕೇಂದ್ರ ಬಸ್ ನಿಲ್ದಾಣ ದಿಂದ ಹೊರಟ ಬಸ್ಸು ಜುಮನಾಳ ಕ್ರಾಸ್, ಹೊನಗನಹಳ್ಳಿ, ತೊನಶ್ಯಾಳ ಕ್ರಾಸ್, ಮುಳವಾಡ ಪ್ರವಾಸಿ ಮಂದಿರ, ಮುಳವಾಡ, ಕಲಗುರ್ಕಿ, ಕಲಗುರ್ಕಿ ರೈಲು ನಿಲ್ದಾಣ, ತಳೇವಾಡ ಕ್ರಾಸ್, ಕೂಡಗಿ ರೈಲು ನಿಲ್ದಾಣ, ಎನ್‌ಟಿಪಿಸಿ, ಅಂಗಡಗೇರಿ ರೈಲು ನಿಲ್ದಾಣ, ವಂದಾಲ ರೈಲು ನಿಲ್ದಾಣ, ಬೇನಾಳ ರೈಲು ನಿಲ್ದಾಣ, ಬೇನಾಳ ಕ್ರಾಸ್, ಆಲಮಟ್ಟಿ ಸರ್ಕಲ್ ಬಸ್ ನಿಲ್ದಾಣ, ಆಲಮಟ್ಟಿ ರೈಲು ನಿಲ್ದಾಣದ ಮುಖಾಂತರ ಆಲಮಟ್ಟಿ ಉದ್ಯಾನಕ್ಕೆ ತಲುಪುತ್ತದೆ ಈ ಸೇವೆಯನ್ನು ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಬೇಕೆಂದು ಸಾರಿಗೆ ಇಲಾಖೆಯ ಅಧಿಕಾರಿಗಳು ಮನವಿ ಮಾಡಿಕೊಂಡಿದ್ದಾರೆ.

## ಬೇನಾಳ ಗ್ರಾಮಸ್ಥರಿಂದ ಅಭಿನಂದನೆ: ಮನವಿಗೆ ಸ್ಪಂದಿಸಿ

ನೂತನ ಬಸ್ ಸಂಚಾರವನ್ನು ಆರಂಭಿಸಿರುವ ವಿಜಯಪುರ ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ಮುಖಂಡರಾದ ಜಿ. ಸಿ. ಮುತ್ತಲದಿನ್ನಿ, ಬಿ. ಎಚ್. ಗಣಿ, ಟಿ. ಎಸ್. ಬಿರಾದಾರ, ನೀಲೇಶ್ ಬೇನಾಳ್, ಮಹೇಶ ಗಾಳಪ್ಪಗೋಳ, ಚಂದ್ರಪ್ಪ ಮನಗೂಳಿ, ರಮೇಶ ವಂದಾಲ, ಮಹಾದೇವಪ್ಪ ಹೊನ್ಯಾಳ, ಎಸ್. ಆರ್. ಬಿರಾದಾರ, ಯಲ್ಲಪ್ಪ ಭಜಂತ್ರಿ, ಮಕ್ತುಮ್ ಬಾಗೇವಾಡಿ, ಶ್ರೀಶೈಲ ಮಠ, ರಾಮಣ್ಣ ಮುತ್ತಲದಿನ್ನಿ, ಬಸು ಕೊಳದಾನವರ, ಹಸನ್ ದಾಲರೋಟಿ, ಮಹಮ್ಮದ್ ಬೇದರಕರ, ಮಹೇಶ ಇಂಗಳೇಶ್ವರ, ಅಬ್ದುಲ್ ಬೆಣ್ಣಿ, ಮೈಬೂಬ್ ಬಾಗವಾನ ಸೇರಿದಂತೆ ಸರ್ವ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.

# ಅನಿತಾ ಕಾರಾಜನಗಿ ಗೆ ಪಿಎಚ್ಡಿ ಪದವಿ ಪ್ರದಾನ

■ ಉದಯರಶ್ಮಿ ದಿನಪತ್ರಿಕೆ



ಅಕ್ಕನ ಅರಿವು,ವಚನ ಅಧ್ಯಯನ ವೇದಿಕೆ ಪುಣೆಯ ಸದಸ್ಯರು ಸಾಹಿತಿ ವಾಗ್ಮಿ ಸಹಶಿಕ್ಷಕಿಯರು ಡಾ.ಕು.ಅನಿತಾ ಫಕೀರಪ್ಪಾ ಕಾರಾಜನಗಿ. ಜಿ.ಪ.ಪ್ರಾ.ಕನ್ನಡ ಶಾಲೆ ಮುಚ್ಚಂಡಿ ವಸ್ತಿ ಸೋನ್ಯಾಳ ತಾ–ಜತ್ತ; ಜಿ – ಸಾಂಗಲಿ ಇವರಿಗೆ ಪುಣ್ಯಶ್ಲೋಕ ಅಹಿಲ್ಯಾದೇವಿ ಹೋಳಕರ ಸೊಲ್ಲಾಪುರ ವಿಶ್ವವಿದ್ಯಾಲಯ ಕನ್ನಡ ವಿಷಯದಲ್ಲಿ ಪಿ ಏಚ್ ಡಿ ಪ್ರದಾನ ಮಾಡಿದೆ.

ಇವರು ಡಾ. ಜಿ ಎಸ್ ಧಬಾಲೆ ಪ್ರಾಂಶುಪಾಲರು ಸಿ ಬಿ ಖೇಡಗಿ, ಬಸವೇಶ್ವರ ವಿಜ್ಞಾನ, ರಾಜಾ ವಿಜಯಸಿಂಹ ಕಾಮರ್ಸ & ರಾಜಾ ಜಯಸಿಂಗ ಆರ್ಟ್ಸ ಕಾಲೇಜ ಅಕ್ಕಲಕೋಟ ಜಿ: ಸೊಲ್ಲಾಪುರ ಇವರ ಮಾರ್ಗದರ್ಶನದ ಅಡಿಯಲ್ಲಿ "ಇಂಚಗೇರಿ ಸಂಪ್ರದಾಯದ ಮಹಾದೇವರು – ಒಂದು ಅಧ್ಯಯನ ಈ ಮಹಾಪ್ರಬಂಧವನ್ನು ಪುಣ್ಯಶ್ಲೋಕ ಅಹಿಲ್ಯಾದೇವಿ ಹೋಳಕರ ಸೊಲ್ಲಾಪುರ ವಿಶ್ವವಿದ್ಯಾಲಯಕ್ಕೆ ಸಾದರ ಪಡಿಸಿ ಪು.ಆ ಪದವಿಯನ್ನು ಪಡೆದಿದ್ದಾರೆ. ಈ ಮೂಲಕ ಮಹಾರಾಷ್ಟ್ರ ಮತ್ತು ಕರ್ನಾಟಕದ ಸಾಹಿತ್ಯ, ಸಂಶೋಧನ ಕ್ಷೇತ್ರಕ್ಕೆ ಅಮೂಲ್ಯವಾದ ಕೊಡುಗೆಯನ್ನು ನೀಡಿದ್ದಾರೆ.

ಇವರ ಅನೇಕ ಲೇಖನಗಳು Journal ಮತ್ತು ISSN, ISBN ಕೃತಿಗಳಲ್ಲಿ ಪ್ರಕಟವಾಗಿವೆ. ಗಡಿ ಕನ್ನಡ ಸಾಹಿತ್ಯ ಸಮ್ಮೇಲನ ಸಾಂಸ್ಕೃತಿಕ ಉತ್ಸವದ ಕವಿಗೋಷ್ಠಿ, ಉಪನ್ಯಾಸದಲ್ಲಿ ನಿರಂತರವಾಗಿ ಭಾಗವಹಿಸುತ್ತಾರೆ. ಇತ್ತಿಚೆಗೆ ಎಪ್ರೀಲ್ 2026 ರಲ್ಲಿ ಕನ್ನಡ ಸಾಮರಸ್ಯದ ನೆಲೆಗಳು – ಇಂಚಗೇರಿ ಮಠ ಪುಸ್ತಕದ ಲೇಖನಕ್ಕೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು ಇವರ ಸಹಯೋಗದಲ್ಲಿ ಮುಖ್ಯಮಂತ್ರಿ ಶ್ರೀ ಸಿದ್ಧಾಮಯ್ಯನವರು ಸತ್ಕರಿಸಿದ್ದಾರೆ.

ಡಾ ಅನಿತಾ ಕಾರಾಜನಗಿ ಒಬ್ಬ ಸರಳ ಸಜ್ಜನಿಕೆಯ ಸಾತ್ವಿಕ ಶಿಕ್ಷಕಿ. ಮುಂದಿನ ಶೈಕ್ಷಣಿಕ, ಸಾಹಿತ್ಯಿಕ, ಧಾರ್ಮಿಕ, ಆದ್ಯಾತ್ಮಿಕ, ಕ್ಷೇತ್ರದಲ್ಲಿ ಇವರು ಇನ್ನಷ್ಟು ಕಾರ್ಯ ಸಾಧನೆ ಮಾಡಲಿ ಎಂದು ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರ ಪುಣೆ ಇದರ ಅಧ್ಯಕ್ಷ ಡಾ ಶಶಿಕಾಂತ ಪಟ್ಟಣ ಸಮಸ್ತ ಲಿಂಗಾಯತ ವೆಲ್ಫೇರ್ ಟ್ರಸ್ಟ್ ಇದರ ಅಧ್ಯಕ್ಷ ಡಾ ಜಯಶ್ರೀ ಶಶಿಕಾಂತ ಪಟ್ಟಣ ಪ್ರೊ ಶಾರದಮ್ಮ ಪಾಟಿಲ ಡಾ ಸರಸ್ವತಿ ಪಾಟೀಲ ಗೌರಮ್ಮ ನಾಶಿ ಡಾ ಉಮಾಕಾಂತ ಶೆಟ್ಕರ್ ಮುಂತಾದ ಅನೇಕರು ಶುಭ ಹಾರೈಸಿದ್ದಾರೆ.

# ಪ್ರತಿ ವಿದ್ಯಾರ್ಥಿಗೆ ಒಂದು ಮರ ಪೋಷಣೆ ಮಾಡುವ ಅರಿವು ಮೂಡಿಸಿ

## ಶಾಲೆಗೊಂದು ಸಸಿ ವಿತರಣಾ ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್ ಆರ್ ನಡುಗಡ್ಡಿ ಸಲಹೆ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಆಧುನಿಕ ತಂತ್ರಜ್ಞಾನದ ಕಾಲದಲ್ಲಿ ಮನುಷ್ಯ ನಿಸರ್ಗ ನಾಶ ಮಾಡುತ್ತಿದ್ದಾನೆ ಸುಂದರ ಪರಿಸರ ನಿರ್ಮಾಣವಾಗಬೇಕಾದರೆ ಶಾಲೆಗಳಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಗೆ ಒಂದು ಮರ ಪೋಷಣೆ ಮಾಡುವ ಅರಿವು ಮೂಡಿಸಿ ಒಂದು ಮರ ದತ್ತು ನೀಡಬೇಕೆಂದು ಪ್ರಭಾರಿ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್ ಆರ್ ನಡುಗಡ್ಡಿ ಹೇಳಿದರು

ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಇಂಡಿ ಘಟಕ ಮತ್ತು ಸಹಕಾರಿ ನೌಕರರ ಬ್ಯಾಂಕಿನ ನಿರ್ದೇಶಕ ಅಲ್ಲಾಭಕ್ಷ ವಾಲಿಕಾರ ಮತ್ತು ಪ್ರಾಥಮಿಕ ಶಾಲಾ ಶಿಕ್ಷಕ ಸಂಘದ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಶಾಲೆಗೊಂದು ಸಸಿ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಸಾಪ ನಿಕಟ ಪೂರ್ವ ಅಧ್ಯಕ್ಷ ಕಾಂತು ಇಂಡಿ, ತಾಲೂಕಿನ ಎಲ್ಲ ಶಾಲೆಗಳಿಗೆ ಸಸಿ ಕೊಟ್ಟಂತಹ ಅಲ್ಲಾಭಕ್ಷ್ ವಾಲಿಕಾರ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಜಯರಾಮ ಚವ್ಹಾಣ ಮಾತನಾಡಿ ಹಸಿರು ನಮ್ಮ ಉಸಿರು ಎಂದು ಹೇಳಿದರು.

ಎಂ ಎಂ ವಾಲಿಕಾರ್, ವೈ ಟಿ ಪಾಟೀಲ್, ಎಸ್ ವ್ಹಿ ಹರಳಯ್ಯ, ಅಲ್ತಾಫ್ ಬೋರಾಮಣಿ, ಜಗದೀಶ್ ಚವಡಿಹಾಳ, ಆನಂದ್ ಕೆಂಭಾವಿ, ಎ ಎಂ ಹೊಸೂರ್, ಡಿ ಎಸ್ ಕಣ್ಮಸ್, ಎಂ ಡಿ ಕಂಠಿಕಾರ್, ಟಿ ಕೆ ಪೂಜಾರಿ, ಎ ಸಿ ಬಡಿಗೇರ್, ಎ ಎಸ್ ಬಡಿಗೇರ, ಬಿ ಎಸ್ ಸೋನ್ನದ, ಪಿಜಿ ಕಲ್ಮನಿ, ಮೋಹನ್ ಕಟಟತದೊಂಡ, ರವಿ ಬಿರಾದಾರ್ ಮತ್ತು ಎಲ್ಲ ಶಾಲೆಯ ಮುಖ್ಯೋಪಾಧ್ಯರು ಮತ್ತಿತರಿದ್ದರು

# ಸತ್ಸಂಗ–ಅಂತರಂಗ ಅರಿಯಲು ಪೂರಕ : ಧ್ರುವ ಕುಲಕರ್ಣಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜೀವನದಲ್ಲಿ ಅತಿಯಾದ ಆಸೆಗಳನ್ನು ತ್ಯಜಿಸಿ, ಸಾತ್ವಿಕ ಚಿಂತನೆ, ಭಕ್ತಿ ಮತ್ತು ಧ್ಯಾನದ ಮೂಲಕ ನಮ್ಮ ಮನಸ್ಸನ್ನು ಹತೋಟಿಯಲ್ಲಿಡಬೇಕು. ಭಗವದ್ಗೀತೆ ಮತ್ತು ಶರಣರ ವಚನಗಳ ಸಾರ–ಸಂದೇಶವು ನಮ್ಮಲ್ಲಿರುವ ಅರಿಷಡ್ವರ್ಗಗಳನ್ನು ತ್ಯಜಿಸುತ್ತಾ, ಅಂಧಕಾರವೆಂಬ ಅಜ್ಞಾನವನ್ನು ತೊಲಗಿಸಿ ಸುಜ್ಞಾನದ ಸುಧೆ ಬೆಳಗುವಂತೆ ಮತ್ತು ಸಮಚಿತ್ತತೆಯಿಂದ ಬದುಕಲು ಮಾರ್ಗದರ್ಶನ ನೀಡುತ್ತವೆ ಎಂದು ಸನಾತನ ಸಾಧಕರಾದ ಧ್ರುವ ಕುಲಕರ್ಣಿ ಅವರು ಅಭಿಪ್ರಾಯಪಟ್ಟರು.

ಅವರು ನಗರದ ಅಲ್–ಅಮೀನ್ ಎದುರಿಗೆ ಇರುವ ಎನ್.ಜಿ.ಓ. ಕಾಲನಿಯ ಆಂಜನೇಯ ದೇವಸ್ಥಾನದಲ್ಲಿ ಜರುಗಿದ ಸತ್ಸಂಗ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಅವರು ಮಾತನಾಡುತ್ತಾ, ಲೌಕಿಕ ಜಂಜಾಟದಿಂದ ಮುಕ್ತಿ ಪಡೆದು ಜೀವನದ ಕೊನೆಯ ಉಸಿರಿರುವರೆಗೂ ಸದಾ ಸಹಾಯ, ಸಹಕಾರ, ಸಮತಾಭಾವ, ಸಮನ್ವಯತೆ ಮತ್ತು ಸಮಷ್ಠಿಭಾವಗಳೆಂಬ ಪಂಚ ಸದ್ಗುಣಗಳನ್ನು ಅನುಪಾಲಿಸಬೇಕು. ನಮ್ಮ ಬದುಕಿನ ನಿಜವಾದ ಅಸ್ತಿತ್ವನ್ನು ಅರಿತುಕೊಂಡು ಅಧ್ಯಾತ್ಮ, ಸತ್ಸಂಗ ಮತ್ತು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಸಕ್ರೀಯವಾಗಿ ಪಾಲ್ಗೊಂಡು ಸಮಾಜದ ಒಳಿತಿಗಾಗಿ ದುಡಿಯುವುದೇ ಜೀವನದ ಸಾರ್ಥಕ್ಯವನ್ನು ಮನಗಾಣಬೇಕು. ಸತ್ಸಂಗವು ವ್ಯಕ್ತಿಯ ಆಲೋಚನೆ, ನಡುವಳಿಕೆ ಮತ್ತು ಜೀವನದ ದೃಷ್ಟಿಕೋನವನ್ನು ಧನಾತ್ಮಕವಾಗಿ ಬದಲಿಸುವ ಶಕ್ತಿಯನ್ನು ಹೊಂದಿವೆ ಎಂದು ಹೇಳಿದರು.

ಪ್ರೊ. ಎಂ.ಎಸ್.ಖೊದ್ನಾಪೂರ ಮಾತನಾಡಿ, ವಚನ ಸಾಹಿತ್ಯ ಪ್ರತಿಯೊಬ್ಬರ ಬದುಕಿಗೆ ಹಾಸುಹೊಕ್ಕಾಗಿದೆ. ವಚನ ಮಾತಿನ ಮೂಲವಾಗಿದ್ದು, ಸಮಾಜದಲ್ಲಿ ಸಾಮಾಜಿಕ ಮೌಲ್ಯ ಎತ್ತಿ ಹಿಡಿಯುವ ಶಕ್ತಿಯನ್ನು ಹೊಂದಿದೆ. ನಾವೆಲ್ಲರೂ ಶರಣರ ವಚನಗಳಲ್ಲಿ ತಿಳಿಸಿರುವ ಸಂದೇಶದಂತೆ, ಪ್ರತಿಯೊಬ್ಬರೂ ಭಕ್ತಿ ಮಾರ್ಗ, ಜ್ಞಾನ ಮಾರ್ಗ ಮತ್ತು ಕಾಯಕ ಮಾರ್ಗದಲ್ಲಿ ಪ್ರಾಮಾಣಿಕವಾಗಿ ನಡೆದು ಜೀವನದಲ್ಲಿ ಸಾರ್ಥಕತೆ ಹೊಂದಬೇಕು. ಪೋಷಕರು ತಮ್ಮ ಮಕ್ಕಳನ್ನು ಇಂತಹ ಸತ್ಸಂಗಗಳಿಗೆ ಕರೆತಂದು ಅವರಿಗೂ ಶಿಕ್ಷಣ ಜತೆಗೆ ಜೀವನ ಮೌಲ್ಯ, ಸಮಾಜದ ಋಣ ಮತ್ತು ಬದುಕಿನ ಸತ್ಯದ ಬಗ್ಗೆ ಅರಿವು ಮೂಡಿಸುವಂತಾಗಬೇಕು ಅಂದಾಗ ಮಾತ್ರ ನಾಳಿನ ನಮ್ಮ ಸಮಾಜದಲ್ಲಿ ಪರಿವರ್ತನೆ ಮತ್ತು ಸುಸ್ಥಿರತೆಯನ್ನು ಸಾಧಿಸಲು ಸಾಧ್ಯವೆಂದು ಹೇಳಿದರು.

ಕಾರ್ಯಕ್ರಮದಲ್ಲಿ ದೇವಸ್ಥಾನದ ಅಧ್ಯಕ್ಷ ಸಂತೋಷ ಪಾಟೀಲ, ಹಿರಿಯರಾದ ಭೀಮರಾಯ ಬಿರಾದಾರ, ಬಾಬು ಕೋಲಕಾರ, ನಾನಾಸಾಬ ಕೂಟನೂರ, ಶಿವಾನಂದ ಬಿಜ್ಜರಗಿ, ಶ್ರೀರಾಂ ದೇಶಪಾಂಡೆ, ರಮೇಶ ಕುಮಟಗಿ, ವೆಂಕಟೇಶ ಹೊಸಮನಿ, ಎಸ್.ಎಸ್.ಬಶೆಟ್ಟಿ, ಆರ್.ಬಿ.ಪೂಜಾರಿ, ಗಂಗಾಧರ ಚಾಬೂಕಸವಾರ, ಬಿ.ಆರ್.ಬಿರಾದಾರ, ಎಸ್.ಬಿ.ಪೂಜಾರಿ, ವಿನಾಯಕ ಕಿಚಡಿ, ಆರ್.ಎಸ್.ತಳವಾರ ಇನ್ನಿತರು ಸಹ ಉಪಸ್ಥಿತರಿದ್ದರು.

ಈ ಸತ್ಸಂಗದಲ್ಲಿ ನವರಸಪುರದ ನೂರಾರು ಮಕ್ಕಳು, ಮಹಿಳೆಯರು, ಹಿರಿಯರು ಸೇರಿದಂತೆ ಭಾಗವಹಿಸಿದ್ದರು. ನಂತರ ಸಾಮೂಹಿಕ ಹನುಮಾನ ಚಾಲೀಸ್ ಪಠಣ ಮತ್ತು ಮಹಾಮಂಗಳಾರತಿ ನೆರವೇರಿತು.

# ಕರ್ನಾಟಕದಲ್ಲಿ 'ಕರ್ತವ್ಯ' ಕ್ರಾಂತಿ: ಸ್ವದೇಶಿ ಎಐ ತಂತ್ರಜ್ಞಾನದ ಹೊಸ ಹೆಜ್ಜೆ

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ರಾಜ್ಯ ಸಾರ್ವಜನಿಕ ಆಡಳಿತದಲ್ಲಿ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ದಕ್ಷತೆಯನ್ನು ಹೆಚ್ಚಿಸಲು ಕರ್ನಾಟಕ ಸರ್ಕಾರವು 'ಕರ್ತವ್ಯ' (KAAMS-Karnataka Advanced Attendance Management System) ಎಂಬ ನೂತನ ಮುಂದುವರಿದ ಹಾಜರಾತಿ ನಿರ್ವಹಣಾ ತಂತ್ರಜ್ಞಾನವನ್ನು ಜಾರಿಗೆ ತಂದಿದೆ.

ಮಾನ್ಯ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಇಲಾಖಾ ಕಾರ್ಯದರ್ಶಿಗಳೊಂದಿಗೆ ನಡೆಸಿದ ಮೊದಲ ಸಭೆಯಲ್ಲೇ ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳು ಕಚೇರಿ ವೇಳೆಯಲ್ಲಿ ಕಡ್ಡಾಯವಾಗಿ 100% ಹಾಜರಿರಬೇಕು ಮತ್ತು ಸಾರ್ವಜನಿಕರ ಕುಂದುಕೊರತೆಗಳಿಗೆ ತಕ್ಷಣ ಸ್ಪಂದಿಸಬೇಕು ಎಂದು ಖಡಕ್ ಸೂಚನೆ ನೀಡಿದ್ದರು.

ಈ ಹಿಂದೆ ಜಾರಿಯಲ್ಲಿದ್ದ ಬಯೋಮೆಟ್ರಿಕ್ ವ್ಯವಸ್ಥೆಯಲ್ಲಿ ಉದ್ಯೋಗಿಗಳು ಕೇವಲ ಡಿಜಿಟಲ್ ಸಹಿ ಮಾಡಿ ಕಚೇರಿಯಿಂದ ಗೈರಾಗುವ ಸಾಧ್ಯತೆಗಳಿದ್ದವು. ಈ ದೋಷವನ್ನು ನಿವಾರಿಸಲು, ಉದ್ಯೋಗಿಗಳ ಭೌತಿಕ ಉಪಸ್ಥಿತಿ ಮತ್ತು ಕಚೇರಿಯ ಭೌಗೋಳಿಕ ಸ್ಥಳವನ್ನು (Geographical Location) ನಿಖರವಾಗಿ ಪತ್ತೆಹಚ್ಚುವ ಈ ಹೊಸ ವ್ಯವಸ್ಥೆಯನ್ನು ರೂಪಿಸಲಾಗಿದೆ.

**ಸಂಪೂರ್ಣ "ಮೇಡ್–ಇನ್–ಕರ್ನಾಟಕ" ಆವಿಷ್ಕಾರ**

ಯಾವುದೇ ಬಾಹ್ಯ ಖಾಸಗಿ ತಂತ್ರಜ್ಞಾನ ಸಂಸ್ಥೆಗಳ ನೆರವಿಲ್ಲದೆ, ಸಂಪೂರ್ಣವಾಗಿ ಸರ್ಕಾರದ ಪರಿಸರ ವ್ಯವಸ್ಥೆಯಲ್ಲೇ "ಕರ್ತವ್ಯ" ಸಾಫ್ಟ್‌ವೇರ್ ಅನ್ನು ವಿನ್ಯಾಸಗೊಳಿಸಿ ಅಭಿವೃದ್ಧಿಪಡಿಸಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ–ಆಡಳಿತ) ಉಸ್ತುವಾರಿಯಲ್ಲಿ, ಸೆಂಟರ್ ಫಾರ್ ಇ–ಗವರ್ನೆನ್ಸ್ (CeG) ಮತ್ತು ಕರ್ನಾಟಕ ಎಐ ಸೆಲ್ (Karnataka AI Cell) ಜಂಟಿಯಾಗಿ ಇದನ್ನು ಸಿದ್ಧಪಡಿಸಿವೆ. ಇದರಿಂದಾಗಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಂತರ ರೂಪಾಯಿ ವೆಂಡರ್ ವೆಚ್ಚ ಉಳಿತಾಯವಾಗಿದ್ದು, ದತ್ತಾಂಶ ಸುರಕ್ಷತೆ ಮತ್ತು ಸ್ವಾಯತ್ತತೆ ಹೆಚ್ಚಾಗಿದೆ. ಕರ್ನಾಟಕದ ಈ ಯಶಸ್ವಿ ಮಾದರಿಯನ್ನು ದೇಶದ ಇತರೆ ರಾಜ್ಯಗಳೂ ಅಳವಡಿಸಿಕೊಳ್ಳಬಹುದಾಗಿದೆ.

**ತಂತ್ರಜ್ಞಾನದ ಪ್ರಮುಖ ವೈಶಿಷ್ಟ್ಯಗಳು**

ಕೃತಕ ಬುದ್ಧಿಮತ್ತೆ (AI) ಆಧಾರಿತ ಮುಖ ಗುರುತಿಸುವಿಕೆ – ವಂಚನೆಯ ಹಾಜರಾತಿಯನ್ನು ತಡೆಯಲು ಲೈವ್‌ನೆಸ್ ಡಿಟೆಕ್ಷನ್ (Liveness Detection) ತಂತ್ರಜ್ಞಾನದೊಂದಿಗೆ ಎಐ ಫೇಶಿಯಲ್ ರೆಕಗ್ನಿಷನ್ ಬಳಸಲಾಗಿದೆ.

ಜಿಯೋಫೆನ್ಸಿಂಗ್ (Geofencing)–ಜಿಐಎಸ್ (GIS) ತಂತ್ರಜ್ಞಾನದ ಮೂಲಕ ಉದ್ಯೋಗಿ ತನ್ನ ಕಚೇರಿಯ ನಿಗದಿತ ಪರಿಧಿಯೊಳಗೆ ಇದ್ದಾಗ ಮಾತ್ರ ಹಾಜರಾತಿ ದಾಖಲಿಸಲು ಸಾಧ್ಯವಾಗುತ್ತದೆ.

ಸಂಯೋಜಿತ ಡೇಟಾಬೇಸ್ – ಇದನ್ನು ಆಧಾರ್ ಇ–ಕೆವೈಸಿ (e-KYC) ಮತ್ತು ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆ (HRMS) ಯೊಂದಿಗೆ ಸಂಯೋಜಿಸಲಾಗಿದೆ.

**ಮೊಬೈಲ್ ಆಪ್ ಮತ್ತು ರಜೆ ನಿರ್ವಹಣೆ**

ಆಂಡ್ರಾಯ್ಡ್ ಮತ್ತು ಐಒಎಸ್ ಆಪ್‌ಗಳ ಮೂಲಕ ಹಾಜರಾತಿ, ರಜೆ ಮತ್ತು ಅಧಿಕೃತ ಹೊರಗಿನ ಕೆಲಸದ (OOD) ವಿವರಗಳನ್ನು ದಾಖಲಿಸುವ ಸೌಲಭ್ಯವಿದೆ. ಇಲಾಖೆಗಳಲ್ಲಿ ದಾಖಲೆ ವೇಗದ ಅನುಷ್ಠಾನ

ಮುಖ್ಯಮಂತ್ರಿಗಳ ಕಟ್ಟುನಿಟ್ಟಿನ ಆದೇಶದ ಬೆನ್ನಲ್ಲೇ ಈ ತಂತ್ರಜ್ಞಾನವು ಇಲಾಖೆಗಳಲ್ಲಿ ಅತ್ಯಂತ ವೇಗವಾಗಿ ಅನುಷ್ಠಾನಗೊಳ್ಳುತ್ತಿದೆ.

ಕಳೆದ ವಾರ ಅಂದಾಜು 2,46,000 ರಷ್ಟಿದ್ದ ಒಟ್ಟು ನೋಂದಾಯಿತ ಉದ್ಯೋಗಿಗಳ ಸಂಖ್ಯೆ ಪ್ರಸ್ತುತ ವಾರದಲ್ಲಿ 3,01,034 ಕ್ಕೆ ಏರಿಕೆಯಾಗಿದೆ.

ಇದು ಕೇವಲ ಒಂದೇ ವಾರದಲ್ಲಿ ಶೇಕಡಾ 25% ಕ್ಕಿಂತಲೂ ಹೆಚ್ಚು (55,000ಕ್ಕೂ ಅಧಿಕ ಹೊಸ ಸೇರ್ಪಡೆ) ಬೆಳವಣಿಗೆಯಾಗಿದೆ. ಇದೇ ಅವಧಿಯಲ್ಲಿ, ಆ್ಯಪ್ ಮೂಲಕ ಪ್ರತಿದಿನ ದಾಖಲಾಗುವ ದೈನಂದಿನ ಹಾಜರಾತಿ ಸಂಖ್ಯೆಯು ಸಹ 1,85,308 ರಿಂದ 2,32,612 ಕ್ಕೆ ಜಿಗಿದಿದ್ದು, ಸಕ್ರಿಯ ಬಳಕೆಯಲ್ಲಿ ಶೇಕಡಾ 25% ರಷ್ಟು ಭಾರಿ ಏರಿಕೆ ದಾಖಲಾಗಿದೆ. ಪ್ರಸ್ತುತ 42 ಇಲಾಖೆಗಳ 4,78,522 ನೌಕರರನ್ನು ಈ ವ್ಯವಸ್ಥೆಗೆ ಒಳಪಡಿಸಲಾಗಿದ್ದು, ಈ ಪೈಕಿ 3.01 ಲಕ್ಷಕ್ಕೂ ಹೆಚ್ಚು ಉದ್ಯೋಗಿಗಳು ಈಗಾಗಲೇ ನೋಂದಾಯಿಸಿಕೊಂಡಿದ್ದಾರೆ. ಕೇವಲ ಒಂದೇ ವಾರದಲ್ಲಿ ನೋಂದಣಿ ಪ್ರಕ್ರಿಯೆಯಲ್ಲಿ ಶೇಕಡಾ 25 ರಷ್ಟು ಅಭೂತಪೂರ್ವ ಪ್ರಗತಿ ಕಂಡುಬಂದಿದೆ.

**ಶಾಲಾ ಶಿಕ್ಷಣ ಇಲಾಖೆ**

ಒಟ್ಟು 1,76,055 ಉದ್ಯೋಗಿಗಳಲ್ಲಿ ಈಗಾಗಲೇ 1,68,252 ನೌಕರರು ನೋಂದಾಯಿಸಿಕೊಂಡಿದ್ದು, 1,41,800ಕ್ಕೂ ಹೆಚ್ಚು ದೈನಂದಿನ ಚೆಕ್–ಇನ್‌ಗಳೊಂದಿಗೆ ಮೊದಲ ಸ್ಥಾನದಲ್ಲಿದೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ: 66,969 ನೋಂದಣಿ ಹಾಗೂ 54,400ಕ್ಕೂ ಹೆಚ್ಚು ದೈನಂದಿನ ಹಾಜರಾತಿಯೊಂದಿಗೆ ಎರಡನೇ ಸ್ಥಾನದಲ್ಲಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆಗಳಲ್ಲಿ ಪ್ರಾಯೋಗಿಕವಾಗಿ ಯಶಸ್ವಿಯಾದ ನಂತರ, ಶಾಲಾ ಶಿಕ್ಷಣ ಇಲಾಖೆಯ ಸಿಬ್ಬಂದಿ ಇದನ್ನು ಸಕ್ರಿಯವಾಗಿ ಬಳಸುತ್ತಿದ್ದಾರೆ. ಇನ್ನುಳಿದ ಹಲವು ಇಲಾಖೆಗಳು ಈಗಾಗಲೇ ಶೇಕಡಾ 90 ಕ್ಕಿಂತ ಹೆಚ್ಚು ನೋಂದಣಿ ಮೈಲಿಗಲ್ಲನ್ನು ದಾಟಿವೆ.

**ಇತರ ಇಲಾಖೆಗಳು:** ಪದವಿ ಪೂರ್ವ ಮಂಡಳಿ, ಆಯುಷ್ (AYUSH), ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮತ್ತು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಗಳು ಈಗಾಗಲೇ 90% ಕ್ಕಿಂತ ಹೆಚ್ಚು ನೋಂದಣಿ ಗುರಿಯನ್ನು ಯಶಸ್ವಿಯಾಗಿ ತಲುಪಿವೆ.

"ಮುಖ್ಯಮಂತ್ರಿಗಳು, ಮುಖ್ಯ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಮಟ್ಟದಲ್ಲಿ ಡಿಸಿ/ಸಿಇಒಗಳು ದಿನನಿತ್ಯ ಈ ವ್ಯವಸ್ಥೆಯ ಡ್ಯಾಶ್‌ಬೋರ್ಡ್ ಅನ್ನು ಮೇಲ್ವಿಚಾರಣೆ ಮಾಡುತ್ತಿದ್ದಾರೆ. ಕಚೇರಿ ಅವಧಿಯಲ್ಲಿ ಅಧಿಕಾರಿಗಳು ಸಾರ್ವಜನಿಕರಿಗೆ ಸಿಗದಿರುವ ಬಗ್ಗೆ ನಾಗರಿಕರು ನೀಡುವ ಪ್ರತಿಕ್ರಿಯೆ (Feedback) ಈ ಸುಶಾಸನದ ಗುರಿಯನ್ನು ತಲುಪಲು ಪ್ರಮುಖ ಪಾತ್ರ ವಹಿಸಲಿದೆ."

**ಸಾರ್ವಜನಿಕರಿಗೆ ಸಿಗಲಿದೆ ಉತ್ತಮ ಸೇವೆ**

**ಸಾರ್ವಜನಿಕ ಸೇವೆಗೆ ಹೊಸ ವೇಗ**

ಮೊಬೈಲ್ ಮೂಲಕವೇ ಹಾಜರಾತಿ ದಾಖಲಿಸುವ ಸೌಲಭ್ಯ ಇರುವುದರಿಂದ ಕಚೇರಿಗಳ ಮುಂಭಾಗದಲ್ಲಿ ಬಯೋಮೆಟ್ರಿಕ್‌ಗಾಗಿ ಸಾಲಿನಲ್ಲಿ ನಿಲ್ಲುವುದು ತಪ್ಪಿದೆ ಎಂದು ಸರ್ಕಾರಿ ನೌಕರರು ಸಂತಸ ವ್ಯಕ್ತಪಡಿಸಿದ್ದಾರೆ.

"ಕರ್ತವ್ಯ ಆ್ಯಪ್ ಪ್ರತಿಯೊಬ್ಬ ಸರ್ಕಾರಿ ನೌಕರನೂ ತನ್ನ ಜವಾಬ್ದಾರಿಯನ್ನು ಹೆಮ್ಮೆ, ಶಿಸ್ತು ಮತ್ತು ನಿರ್ದಿಷ್ಟ ಉದ್ದೇಶದೊಂದಿಗೆ ನಿರ್ವಹಿಸಲು ಶಕ್ತಿ ತುಂಬುತ್ತಿದೆ".

ಅಂತಿಮವಾಗಿ, ಕಚೇರಿಗಳಲ್ಲಿ ಅಧಿಕಾರಿಗಳ ಭೌತಿಕ ಲಭ್ಯತೆ ಮತ್ತು ವಿಶ್ವಾಸಾರ್ಹತೆಯನ್ನು ಖಾತರಿಪಡಿಸುವ ಮೂಲಕ ಸಾರ್ವಜನಿಕರಿಗೆ ಸಿಗುವ ಸೇವೆಗಳು ಇನ್ನು ಮುಂದೆ ಹೆಚ್ಚು ಸುಲಭ ಹಾಗೂ ತಡೆರಹಿತವಾಗಲಿವೆ. ಈ ಮೂಲಕ ಕರ್ನಾಟಕವು ಡಿಜಿಟಲ್ ಆಡಳಿತ ಮತ್ತು ನಾಗರಿಕ ಕೇಂದ್ರಿತ ಸುಧಾರಣೆಯಲ್ಲಿ ದೇಶದಲ್ಲೇ ಮುಂಚೂಣಿ ರಾಜ್ಯವಾಗಿ ಹೊರಹೊಮ್ಮಿದೆ ಎಂದು ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR